# ಕರ್ನಾಟಕ ವಿಧಾನ ಪರಿಷತ್

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 563 |
| ಸದಸ್ಯರ ಹೆಸರು | ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 08-12-2023 |
| ಉತ್ತರಿಸುವ ಸಚಿವರು | ಕೃಷಿ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | 2022-23 ಮತ್ತು 2023-24ನೇ ಸಾಲಿನಲ್ಲಿ ರಾಜ್ಯದ ರೈತರ ಕಲ್ಯಾಣಕ್ಕಾಗಿ ರೂಪಿಸಿರುವ ಯೋಜನೆಗಳ ಸಂಪೂರ್ಣ ವಿವರ ನೀಡುವುದು: (ಪ್ರತ್ಯೇಕವಾಗಿ ಮಾಹಿತಿ ನೀಡುವುದು). | 2022-23ನೇ ಸಾಲಿನಲ್ಲಿ ರಾಜ್ಯದ ರೈತರ ಕಲ್ಯಾಣಕ್ಕಾಗಿ ರೂಪಿಸಿರುವ ಯೋಜನೆಗಳ ವಿವರಗಳನ್ನು ಅನುಬಂಧ-1(ಅ) ರಲ್ಲಿ ಹಾಗೂ 2023-24ನೇ ಸಾಲಿನಲ್ಲಿ ರಾಜ್ಯದ ರೈತರ ಕಲ್ಯಾಣಕ್ಕಾಗಿ ರೂಪಿಸಿರುವ ಯೋಜನೆಗಳ ವಿವರ ಅನುಬಂಧ -1(ಆ) ರಲ್ಲಿ ನೀಡಲಾಗಿದೆ<br><br>2022-23 ಮತ್ತು 2023-24 ನೇ ಸಾಲಿನಲ್ಲಿ ಜಲಾನಯನ ಅಭಿವೃದ್ಧಿ ಇಲಾಖೆಯಲ್ಲಿ ರಾಜ್ಯದ ರೈತರ ಕಲ್ಯಾಣಕ್ಕಾಗಿ ರೂಪಿಸಿರುವ/ ಅನುಷ್ಠಾನದಲ್ಲಿರುವ ಯೋಜನೆಗಳ ವಿವರವನ್ನು **ಅನುಬಂಧ-1** ರಲ್ಲಿ ಸಲ್ಲಿಸಿದೆ. |
| ಆ) | ಹಿಂದಿನ ಸರ್ಕಾರ ರೂಪಿಸಲಾದ ರೈತರ ಕಲ್ಯಾಣ ಯೋಜನೆಗಳನ್ನು ಯಥಾವತ್ತಾಗಿ ಮುಂದುವರೆಸಲಾಗಿದೆಯೇ ಅಥವಾ ಯಾವುದಾದರೂ ಯೋಜನೆಗಳನ್ನು ಕೈಬಿಡಲಾಗಿದೆಯೇ:<br>ಯೋಜನೆಗಳನ್ನು ನಿಲ್ಲಿಸಿದಲ್ಲಿ ವಿವರಗಳೊಂದಿಗೆ ಸಂಪೂರ್ಣ ಮಾಹಿತಿ ನೀಡುವುದು: | ಪ್ರಸ್ತುತ ಸಾಲಿನಲ್ಲಿ ಪ್ರಧಾನ ಮಂತ್ರಿ ಕಿಸಾನ್ ಸಮ್ಮಾನ್-ಕರ್ನಾಟಕ ಯೋಜನೆ ಮತ್ತು ರೈತ ಶಕ್ತಿ ಯೋಜನೆಗಳನ್ನು ಕೈಬಿಡಲಾಗಿರುತ್ತದೆ.<br><br>1) ರಾಜ್ಯವಲಯ ಯೋಜನಯಾದ "ಜಲಾನಯನ ಅಭಿವೃದ್ಧಿ ಮೂಲಕ ಬರಗಾಲವನ್ನು ತಡೆಯುವಿಕೆ" ಕಾರ್ಯಕ್ರಮದ (2019-20 ರಿಂದ 2023-24) ಅಡಿ 2023-24ನೇ ಸಾಲಿನ ರಾಜ್ಯ ಆಯವ್ಯಯದಲ್ಲಿ ಅನುದಾನ ಒದಗಿಸಿರುವುದಿಲ್ಲ.<br><br>**ಯೋಜನೆಯನ್ನು ಕೈಬಿಡಲು/ ಮುಂದುವರೆಸದಿರಲು ಕಾರಣಗಳು:** 2018-19ನೇ ಸಾಲಿನವರೆಗೆ ಚಾಲ್ತಿಯಲ್ಲಿದ್ದ ಕೇಂದ್ರ ಸರ್ಕಾರದ ಸಮಗ್ರ ಜಲಾನಯನ ಅಭಿವೃದ್ಧಿ ಕಾರ್ಯಕ್ರಮದಡಿ ಜಲಾನಯನ ಅಭಿವೃದ್ಧಿ ಚಟುವಟಿಕೆಗಳನ್ನು ಅನುಷ್ಠಾನಗೊಳಿಸಲಾ ಗುತ್ತಿತ್ತು. ಸದರಿ ಯೋಜನೆಯು ಮುಕ್ತಾಯಗೊಂಡ ಹಿನ್ನಲೆಯಲ್ಲಿ ಹಾಗೂ ಜಿಲ್ಲೆಗಳಲ್ಲಿ ಜಲಾನಯನ ಅಭಿವೃದ್ಧಿ ಚಟುವಟಿಕೆಗಳನ್ನು ಅನುಷ್ಠಾನಗೊಳಿಸಲು ಇನ್ನೂ ಅವಕಾಶಗಳಿದ್ದುದನ್ನು ಪರಿಗಣನೆಯಲ್ಲಿರಿಸಿ, 2019-20ನೇ ಸಾಲಿನಲ್ಲಿ ರಾಜ್ಯವಲಯ ಯೋಜನೆಯಾದ ಜಲಾನಯನ ಅಭಿವೃದ್ಧಿ ಮೂಲಕ ಬರಗಾಲವನ್ನು ತಡೆಯುವಿಕೆ |

<table>
<tr>
<td></td>
<td></td>
<td>
ಕಾರ್ಯಕ್ರಮವನ್ನು ಫೆಬ್ರುವರಿ-2019ರ ರಾಜ್ಯ ಆಯವ್ಯಯದಲ್ಲಿ ಘೋಷಿಸಿ, 2019-20 ರಿಂದ 2023-24 ರವರೆಗೆ ಐದು ವರ್ಷಗಳ ಅವಧಿಗೆ ಒಟ್ಟು 4.70 ಲಕ್ಷ ಹೆಕ್ಟೇರ್ ಪ್ರದೇಶವನ್ನು ಉಪಚರಿಸಲು ಕಾರ್ಯಕ್ರಮಕ್ಕೆ ಅನುಮೋದನೆಯನ್ನು ನೀಡಲಾಗಿತ್ತು.<br><br>
2019-20 ರಿಂದ 2022-2023ನೇ ಸಾಲಿನ ವರೆಗೆ ಸದರಿ ಯೋಜನೆಯಡಿ ಬಿಡುಗಡೆಯಾದ ಅನುದಾನ ಹಾಗೂ ವೆಚ್ಚದ ವಿವರಗಳು ಈ ಕೆಳಗಿನಂತಿದೆ.<br><br>
ರೂ.ಲಕ್ಷಗಳಲ್ಲಿ
<table>
<tr><th>ಕ್ರ. ಸಂ.</th><th>ವರ್ಷ</th><th>ಅನುದಾನ ಬಿಡುಗಡೆ</th><th>ವೆಚ್ಚ</th></tr>
<tr><td>1</td><td>2019-20</td><td>2500.00</td><td>2368.79</td></tr>
<tr><td>2</td><td>2020-21</td><td>2500.00</td><td>2472.91</td></tr>
<tr><td>3</td><td>2021-22</td><td>4000.00</td><td>3997.59</td></tr>
<tr><td>4</td><td>2022--23</td><td>4000.00</td><td>3999.24</td></tr>
<tr><td></td><td>ಒಟ್ಟು</td><td>13000.00</td><td>12838.53</td></tr>
</table>
ನಂತರದಲ್ಲಿ, 2020-21ರಲ್ಲಿ ಕೇಂದ್ರ ಪುರಸ್ಕೃತ ಜಲಾನಯನ ಅಭಿವೃದ್ಧಿ ಘಟಕ - ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆ 2.0 (WDC-PMKSY 2.0) ಕಾರ್ಯಕ್ರಮಕ್ಕೆ ಅನುಮೋದನೆ ದೊರೆತು ಕೇಂದ್ರ ಮತ್ತು ರಾಜ್ಯಗಳ ನಡುವೆ ಶೇ.60:40ರ ಅನುಪಾತದಲ್ಲಿ ಅನುಷ್ಠಾನ ಪ್ರಾರಂಭಗೊಳಿಸಲಾಯಿತು. PMKSY-WDC 2.0 ಕಾರ್ಯಕ್ರಮವು ಪೂರ್ಣ ಪ್ರಮಾಣದಲ್ಲಿ ಚಾಲನೆಗೊಂಡ ಹಿನ್ನಲೆಯಲ್ಲಿ ರಾಜ್ಯ ವಲಯ ಯೋಜನೆ ಜಲಾನಯನ ಅಭಿವೃದ್ಧಿ ಮೂಲಕ ಬರಗಾಲವನ್ನು ತಡೆಯುವಿಕೆ ಕಾರ್ಯಕ್ರಮಕ್ಕೆ ಹಿಂದಿನ ಸರ್ಕಾರ 2023-24ನೇ ಸಾಲಿಗೆ ರಾಜ್ಯ ಆಯವ್ಯಯದಲ್ಲಿ ಅನುದಾನವನ್ನು ಒದಗಿಸಿರುವುದಿಲ್ಲ.<br><br>
2) ಕೃಷಿ ಇಲಾಖೆಯ ಅನುದಾನದಿಂದ ಅನುಷ್ಠಾನದಲ್ಲಿದ್ದ ರಾಷ್ಟ್ರೀಯ ಕೃಷಿ ವಿಕಾಸ ಯೋಜನೆಯಡಿ ರೈತ ಉತ್ಪಾದಕ ಸಂಸ್ಥೆಗಳ ರಚನೆ ಮತ್ತು ಸಾರ್ವಜನಿಕ ಖಾಸಗಿ ಸಹಭಾಗಿತ್ವದಲ್ಲಿ ಸಮಗ್ರ ಕೃಷಿ ಅಭಿವೃದ್ಧಿ ಕಾರ್ಯಕ್ರಮಗಳ ಅವಧಿಯು 2022-23ನೇ ಸಾಲಿಗೆ ಮುಕ್ತಾಯಗೊಂಡಿರುತ್ತದೆ.
</td>
</tr>
<tr>
<td>ಇ)</td>
<td>ಪ್ರಸ್ತುತ ಹಣಕಾಸು ವರ್ಷದಲ್ಲಿ ರೈತರ ಕಲ್ಯಾಣಕ್ಕಾಗಿ ಮೀಸಲಿಟ್ಟ ಅನುದಾನ, ಮಂಜೂರು ಮಾಡಿದ ಅನುದಾನ ಹಾಗೂ ಬಳಕೆಯಾದ ಅನುದಾನದ ಸಂಪೂರ್ಣ ಮಾಹಿತಿ</td>
<td>ಪ್ರಸ್ತುತ ಹಣಕಾಸು ವರ್ಷದಲ್ಲಿ ರೈತರ ಕಲ್ಯಾಣಕ್ಕಾಗಿ ಮೀಸಲಿಟ್ಟ ಅನುದಾನ, ಮಂಜೂರು ಮಾಡಿದ ಅನುದಾನ ಹಾಗೂ ಬಳಕೆಯಾದ ಅನುದಾನ ಹಾಗೂ ಬಳಕೆಯಾಗದಿರುವ ಅನುದಾನಕ್ಕೆ</td>
</tr>
</table>

| | | |
|---|---|---|
| | ನೀಡುವುದು: ಮಂಜೂರಾದ ಅನುದಾನವನ್ನು ಬಳಕೆ ಮಾಡದಿದ್ದಲ್ಲಿ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು: | ತೆಗೆದುಕೊಂಡಿರುವ ಕ್ರಮ ಕುರಿತು ವಿವರಗಳನ್ನು ಅನುಬಂಧ- 2ರಲ್ಲಿ ನೀಡಲಾಗಿದೆ<br><br>ಪ್ರಸ್ತುತ ಹಣಕಾಸು ವರ್ಷದಲ್ಲಿ ರೈತರ ಕಲ್ಯಾಣಕ್ಕಾಗಿ ಜಲಾನಯನ ಅಭಿವೃದ್ಧಿ ಇಲಾಖೆಯಡಿ ಮೀಸಲಿಟ್ಟ ಅನುದಾನ, ಮಂಜೂರು ಮಾಡಿದ ಅನುದಾನ ಹಾಗೂ ಬಳಕೆಯಾದ ಅನುದಾನದ ವಿವರ **ಅನುಬಂಧ-2 (ಅ)** ರಲ್ಲಿ ಸಲ್ಲಿಸಿದೆ. |
| ಈ) | ಬರಗಾಲದ ಸಮಯದಲ್ಲಿ ರೈತರ ಬೆಳೆಗಳು ಹಾನಿಯಾಗಿದ್ದು, ಅವರನ್ನು ಆರ್ಥಿಕವಾಗಿ ಸಧೃಡಗೊಳಿಸಲು ಹಾಗೂ ಬರದಿಂದಾದ ನಷ್ಟವನ್ನು ತುಂಬಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು? | ರೈತರನ್ನು ಆರ್ಥಿಕವಾಗಿ ಸದೃಢಗೊಳಿಸಲು ಇತರೆ ಇಲಾಖೆಗಳ ಸಮನ್ವಯದೊಂದಿಗೆ ವಿವಿಧ ಯೋಜನೆಗಳನ್ನು ಅನುಷ್ಠಾನಗೊಳಿಸುವ ಮೂಲಕ ಕ್ರಮ ಕೈಗೊಳ್ಳಲಾಗುತ್ತಿದೆ.<br><br>ಕರ್ನಾಟಕ ರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ್ ಬಿಮಾ ಯೋಜನೆಯಡಿ ಮುಂಗಾರು 2023ರ ಹಂಗಾಮಿನಲ್ಲಿ ಪ್ರಕೃತಿ ವಿಕೋಪದಡಿ ಬಿತ್ತನೆ/ ನಾಟಿ ಪೂರ್ಣವಾಗಿ ವಿಫಲಗೊಂಡ (Prevented sowing/ planting risk) ಮತ್ತು ಮಧ್ಯಂತರ ಬೆಳೆ ವಿಮೆ ಪರಿಹಾರದಡಿ ಒಟ್ಟು 6.77 ಲಕ್ಷ ರೈತ ಫಲಾನುಭವಿಗಳಿಗೆ ರೂ.45959.47 ಲಕ್ಷಗಳ ಬೆಳೆ ವಿಮೆ ಪರಿಹಾರ ಮೊತ್ತವನ್ನು ವಿಮಾ ಸಂಸ್ಥೆಯಿಂದ ಇತ್ಯರ್ಥಪಡಿಸಲಾಗುತ್ತಿದೆ. |

**ಸಂಖ್ಯೆ:AGRI/238/AML/2023**

7/12

**(ಎನ್. ಚಲುವರಾಯಸ್ವಾಮಿ )**
ಕೃಷಿ ಸಚಿವರು

**LCQ 563**

**ಅನುಬಂಧ-1ಅ**

**2022-23ನೇ ಸಾಲಿನಲ್ಲಿ ರಾಜ್ಯದ ರೈತರ ಕಲ್ಯಾಣಕ್ಕಾಗಿ ರೂಪಿಸಿರುವ ಯೋಜನೆಗಳ ವಿವರಗಳು**

| ಕ್ರ. ಸಂ | ಯೋಜನೆ/ ಕಾರ್ಯಕ್ರಮ | ವಿವರಗಳು |
|---|---|---|
| 1. | ಬಿತ್ತನೆ ಬೀಜಗಳ ಪೂರೈಕೆ | ಈ ಯೋಜನೆಯಡಿ ಸಾಮಾನ್ಯ ವರ್ಗದ ರೈತರಿಗೆ ಶೇ. 50 ರವರೆಗೆ ಹಾಗೂ ಪರಿಶಿಷ್ಟ ಜಾತಿ/ಪಂಗಡದ ರೈತರಿಗೆ ಶೇ.75 ರವರೆಗೆ ರಿಯಾಯಿತಿ ದರದಲ್ಲಿ ವಿವಿಧ ಬೆಳೆಗಳ ಪ್ರಮಾಣಿತ/ ನಿಜ ಚೀಟಿ ಬಿತ್ತನೆ ಬೀಜಗಳನ್ನು ಒಟ್ಟಾರೆ ಗರಿಷ್ಟ 2.00 ಹೆಕ್ಟೇರ್ ಅಥವಾ ಅವರ ವಾಸ್ತವಿಕ ಹಿಡುವಳಿ (Actual holding) ಯಾವುದು ಕಡಿಮೆಯೋ ಆ ವಿಸ್ತೀರ್ಣಕ್ಕೆ ಮಾತ್ರ ವಿತರಣೆ ಮಾಡಲಾಗಿರುತ್ತದೆ. |
| 2. | ಹೊಸ ಬೆಳೆ ವಿಮೆ ಯೋಜನೆ/ಕರ್ನಾಟಕ ರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ್ ಬಿಮಾ ಯೋಜನೆ | ಈ ಯೋಜನೆಯಡಿ ಪ್ರಕೃತಿ ವಿಕೋಪಗಳಿಂದ ಯಾವುದೇ ಅಧಿಸೂಚಿತ ಬೆಳೆ ವಿಫಲವಾದ ಪಕ್ಷದಲ್ಲಿ ರೈತರಿಗೆ ವಿಮಾ ರಕ್ಷಣೆ ಮತ್ತು ಆರ್ಥಿಕ ಬೆಂಬಲ ಒದಗಿಸುವುದು ಹಾಗೂ ಪ್ರಕೃತಿ ವಿಕೋಪಗಳಾದ ಅಲಿಕಲ್ಲು ಮಳೆ, ಭೂ ಕುಸಿತ, ಬೆಳೆ ಮುಳುಗಡೆ, ಮೇಘ ಸ್ಫೋಟ ಮತ್ತು ಗುಡುಗು-ಮಿಂಚುಗಳಿಂದಾಗುವ ಬೆಂಕಿ ಅವಘಡ, ಇತ್ಯಾದಿಗಳಿಂದ ಉಂಟಾಗುವ ನಷ್ಟವನ್ನು ವೈಯಕ್ತಿಕವಾಗಿ ನಿರ್ಧರಿಸಿ ಬೆಳೆವಿಮಾ ನಷ್ಟ ಪರಿಹಾರವನ್ನು ಇತ್ಯರ್ಥಪಡಿಸಿ ರೈತರನ್ನು ರಕ್ಷಿಸುವುದು. KRSPMFBY ಯೋಜನೆಯಡಿ ನೊಂದಾಯಿಸಿದ 2279613 ರೈತ ಪ್ರಸ್ತಾವನೆಗಳಿಗೆ ವಿಮಾ ಕಂತಿನ ರಿಯಾಯಿತಿಯಲ್ಲಿ ರಾಜ್ಯ ಸರ್ಕಾರದ ಪಾಲನ್ನು ಭರಿಸಲಾಗಿರುತ್ತದೆ. |
| 3. | ಬೆಳೆ ಸಮೀಕ್ಷೆ ಕಾರ್ಯಕ್ರಮ | ರಾಜ್ಯದ ಎಲ್ಲಾ ರೈತರ ಜಮೀನುಗಳಲ್ಲಿ ಸರ್ವೆ ಮತ್ತು ಹಿಸ್ಸಾ ನಂಬರ್ ವಾರು ಬೆಳೆದಿರುವ ಬೆಳೆಗಳ ಮಾಹಿತಿಯನ್ನು ಮೊಬೈಲ್ ಆಪ್ ಮೂಲಕ ಜಿಪಿಎಸ್ ನಿಖರತೆಯೊಂದಿಗೆ ಸಂಗ್ರಹಿಸುವುದು ಮತ್ತು ಸಂಗ್ರಹಿಸಿದ ಬೆಳೆ ಸಮೀಕ್ಷೆ ದತ್ತಾಂಶವನ್ನು ರಾಜ್ಯ ಮತ್ತು ಕೇಂದ್ರ ಸರ್ಕಾರದಿಂದ ವಿವಿಧ ಇಲಾಖೆಗಳ ಮೂಲಕ ವಿವಿಧ ಯೋಜನೆಗಳ ಅನುಷ್ಠಾನದಲ್ಲಿ ಉಪಯೋಗಿಸಲಾಗುತ್ತಿದೆ. ಅದೇ ರೀತಿ ಬೆಳೆ ಸಮೀಕ್ಷೆ ದತ್ತಾಂಶವು ಎಲ್ಲಾ ರೈತರಿಗೂ ಸಹ ಲಭ್ಯವಿರುತ್ತದೆ. |
| 4. | ಪ್ರಧಾನ ಮಂತ್ರಿ ಕಿಸಾನ್ ಸಮ್ಮಾನ್ ನಿಧಿ ಯೋಜನೆ (PMKISAN) | ಭಾರತ ಸರ್ಕಾರದ ಪ್ರಧಾನ ಮಂತ್ರಿ ಕಿಸಾನ್ ಸಮ್ಮಾನ್ ನಿಧಿ ಯೋಜನೆಯಡಿ ಸಾಗುವಳಿ ಭೂಮಿ ಹೊಂದಿರುವ ಎಲ್ಲಾ ಅರ್ಹ ರೈತರಿಗೆ ಕೇಂದ್ರ ಸರ್ಕಾರ ವಾರ್ಷಿಕ ರೂ.6000/-ಗಳ ನಗದನ್ನು ರೂ.2000/-ಗಳಂತೆ ಮೂರು ಕಂತುಗಳಲ್ಲಿ ನೇರ ನಗದು ವರ್ಗಾವಣೆ ಮೂಲಕ ನಾಲ್ಕು ತಿಂಗಳಿಗೊಮ್ಮೆ ನೀಡಲಾಗುತ್ತದೆ. ಇದರ ಜೊತೆಗೆ ಕರ್ನಾಟಕ ರಾಜ್ಯ ಸರ್ಕಾರದಿಂದ ಹೆಚ್ಚುವರಿಯಾಗಿ ಈ ಅರ್ಹ ಫಲಾನುಭವಿಗಳಿಗೆ ರೂ.4000/-ಗಳನ್ನು ಎರಡು ಕಂತುಗಳಲ್ಲಿ ನೀಡಲಾಗಿರುತ್ತದೆ. |

| | | |
|---|---|---|
| 5. | ಮುಖ್ಯಮಂತ್ರಿ ರೈತ ವಿದ್ಯಾ ನಿಧಿ ಕಾರ್ಯಕ್ರಮ | ರೈತರ ಮಕ್ಕಳು ಸ್ನಾತಕೋತ್ತರ ಶಿಕ್ಷಣದವರೆಗೆ ವಿದ್ಯಾಭ್ಯಾಸ ಪಡೆಯುವುದನ್ನು ಪ್ರೋತ್ಸಾಹಿಸಲು 'ಮುಖ್ಯಮಂತ್ರಿ ರೈತ ವಿದ್ಯಾನಿಧಿ' ಕಾರ್ಯಕ್ರಮವನ್ನು ಅನುಷ್ಠಾನ ಮಾಡಲಾಗಿದೆ. 'ಮುಖ್ಯಮಂತ್ರಿ ರೈತ ವಿದ್ಯಾನಿಧಿ' ವಿದ್ಯಾರ್ಥಿವೇತನವನ್ನು ವಿತರಿಸುವ ಉದ್ದೇಶಕ್ಕೆ ರಾಜ್ಯದ ವಿವಿಧ ಇಲಾಖೆಗಳು ನಿರ್ವಹಿಸುತ್ತಿರುವ ಶೈಕ್ಷಣಿಕ ಹಾಗೂ ಇತರೆ ದತ್ತಾಂಶದ ಆಧಾರದ ಮೇಲೆ ಅರ್ಹ ಫಲಾನುಭವಿಗಳನ್ನು ಗುರುತಿಸಿ (On entitlement basis) ವಿದ್ಯಾರ್ಥಿ ವೇತನವನ್ನು ವಿತರಿಸುವುದು ಹಾಗೂ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಿದಲ್ಲಿ, ಅಂತಹ ಪ್ರಕರಣಗಳನ್ನು ಸಹ ಪರಿಗಣಿಸಿ ಅರ್ಹರಿಗೆ ವಿದ್ಯಾರ್ಥಿ ವೇತನವನ್ನು ನೇರ ನಗದು ವರ್ಗಾವಣೆ (Direct Benefit Transfer) ಮೂಲಕ ವರ್ಗಾಯಿಸಲಾಗುತ್ತದೆ.<br>2022-23ನೇ ಶೈಕ್ಷಣಿಕ ಸಾಲಿನಿಂದ ವಿದ್ಯಾಭ್ಯಾಸ ಮಾಡುತ್ತಿರುವ ಭೂರಹಿತ ಕೃಷಿ ಕಾರ್ಮಿಕರ ಮಕ್ಕಳಿಗೆ ಹೆಚ್ಚಿನ ಪ್ರೋತ್ಸಾಹ ನೀಡುವ ಉದ್ದೇಶದಿಂದ ಮುಖ್ಯಮಂತ್ರಿ ರೈತ ವಿದ್ಯಾ ನಿಧಿ ಕಾರ್ಯಕ್ರಮವನ್ನು ವಿಸ್ತರಿಸಲಾಗಿರುತ್ತದೆ. |
| 6. | ಸಾವಯವ ಕೃಷಿ | ಸಾವಯವ ಕೃಷಿ ಅಳವಡಿಕೆ ಮತ್ತು ದೃಡೀಕರಣ ಕಾರ್ಯಕ್ರಮದಡಿ ರಾಜ್ಯದ ಸಾವಯವ ಪ್ರಮಾಣೀಕೃತ ಪ್ರದೇಶವನ್ನು ವಿಸ್ತರಿಸುವ ನಿಟ್ಟಿನಲ್ಲಿ ಆಸಕ್ತ ಗುಂಪು ಮತ್ತು ವ್ಯಕ್ತಿಗತ ಪ್ರಸ್ತಾವನೆಗಳ ಪ್ರಮಾಣೀಕರಣಕ್ಕಾಗಿ ಅನುದಾನ ಬಳಕೆ ಮಾಡಲಾಗಿರುತ್ತದೆ. |
| 7. | ರೈತ ಸಿರಿ | ಸಿರಿಧಾನ್ಯಗಳಾದ ನವಣೆ, ಹಾರಕ, ಸಾಮೆ, ಕೊರಲೆ, ಊದಲು ಹಾಗೂ ಬರಗು ಬೆಳೆಗಳನ್ನು ಬೆಳೆದ ಎಲ್ಲಾ ವರ್ಗದ ರೈತರಿಗೆ ಬೆಳೆ ಸಮೀಕ್ಷೆ ಆಧಾರದ ಮೇರೆಗೆ ಪ್ರತಿ ಹೆಕ್ಟೇರಿಗೆ ರೂ.10,000/-ದಂತೆ ಗರಿಷ್ಠ ಎರಡು ಹೆಕ್ಟೇರುಗಳಿಗೆ ಪ್ರೋತ್ಸಾಹಧನವನ್ನು ನೇರ ನಗದು ವರ್ಗಾವಣೆ ಮೂಲಕ ನೀಡಲಾಗಿರುತ್ತದೆ. |
| 8. | ಕೃಷಿ ಪ್ರಶಸ್ತಿ ಮತ್ತು ಕೃಷಿ ಪಂಡಿತ ಪ್ರಶಸ್ತಿ | ಕೃಷಿ ಪಂಡಿತ ಪ್ರಶಸ್ತಿ: ಕೃಷಿ ಕ್ಷೇತ್ರದಲ್ಲಿ ವಿನೂತನ ಅನ್ವೇಷಣೆ ಮತ್ತು ಸೃಜನಾತ್ಮಕ ಕಾರ್ಯಗಳಿಂದ ಗಮನಾರ್ಹ ಸಾಧನೆ ಮಾಡಿರುವ ಮತ್ತು ರೈತ ಸಮುದಾಯದ ಅಭಿವೃದ್ಧಿಗಾಗಿ ಕೊಡುಗೆ ನೀಡುತ್ತಿರುವ ರೈತ ಮತ್ತು ರೈತ ಮಹಿಳೆಯರಿಗೆ ಕೃಷಿ ಪಂಡಿತ ಪ್ರಶಸ್ತಿ ನೀಡ ಮಾಡಲಾಗಿರುತ್ತದೆ.<br>ಕೃಷಿ ಪ್ರಶಸ್ತಿ : ಕೃಷಿ ಕ್ಷೇತ್ರದಲ್ಲಿ ಉತ್ಪಾದನೆ ಮತ್ತು ಉತ್ಪಾದಕತೆಯನ್ನು ಹೆಚ್ಚಿಸಲು ರೈತರಲ್ಲಿ ಆರೋಗ್ಯಕರ ಸ್ಪರ್ಧಾ ಮನೋಭಾವನೆಯನ್ನು ಉಂಟು ಮಾಡಿ ಅತಿ ಹೆಚ್ಚು ಇಳುವರಿ ಪಡೆಯುವ ರೈತ ಮತ್ತು ರೈತ ಮಹಿಳೆಯರಿಗೆ ಕೃಷಿ ಪ್ರಶಸಿಯನ್ನು ನೀಡಲಾಗಿರುತ್ತದೆ. |

| | | |
|---|---|---|
| 9. | ಸೂಕ್ಷ್ಮ ನೀರಾವರಿ | ನೀರನ್ನು ಸಮರ್ಥ ಮತ್ತು ಸಮರ್ಪಕ ಬಳಕೆಗೆ ಪ್ರೋತ್ಸಾಹಿಸಲು ಹಾಗೂ ಮಿತ ಬಳಕೆಯಿಂದ ಅಧಿಕ ಇಳುವರಿ ಪಡೆಯಲು ಹಾಗೂ ಸೂಕ್ಷ್ಮ (ಹನಿ/ತುಂತುರು) ನೀರಾವರಿ ಪದ್ಧತಿಯ ಅಳವಡಿಕೆಗೆ ಎಲ್ಲಾ ವರ್ಗದ ರೈತರಿಗೆ 2.0 ಹೆಕ್ಟೇರ್ ಪ್ರದೇಶದವರೆಗೆ ತುಂತುರು ನೀರಾವರಿಗೆ ಶೇ.90ರ ಸಹಾಯಧನ, ಸಣ್ಣ / ಅತಿ ಸಣ್ಣ / ಪ.ಜಾ / ಪ.ಪಂ. ವರ್ಗದ ರೈತರಿಗೆ 2.0 ಹೆಕ್ಟೇರ್ ಪ್ರದೇಶದವರೆಗೆ ಹನಿ ನೀರಾವರಿಗೆ ಶೇ.90ರ ಸಹಾಯಧನ, ಉಳಿದ ಎಲ್ಲಾ ರೈತರ ವರ್ಗಕ್ಕೆ 5.0 ಹೆಕ್ಟೇರ್ ಪ್ರದೇಶದವರೆಗೆ ಶೆ.45ರ ಸಹಾಯಧನವನ್ನು ನೀಡಲಾಗಿರುತ್ತದೆ. |
| 10. | ಕೃಷಿ ಯಾಂತ್ರೀಕರಣ/ಕೃಷಿ ಯಾಂತ್ರೀಕರಣ ಉಪ ಅಭಿಯಾನ ಹಾಗೂ<br>ಕೃಷಿ ಉತ್ಪನ್ನಗಳ ಸಂಸ್ಕರಣೆ | ಸಣ್ಣ ಟ್ರ್ಯಾಕ್ಟರ್, ಪವರ್ ಟಿಲ್ಲರ್, ಭೂಮಿ ಸಿದ್ಧತೆ ಉಪಕರಣಗಳು, ನಾಟಿ / ಬಿತ್ತನೆ ಉಪಕರಣಗಳು, ಟ್ರ್ಯಾಕ್ಟರ್ / ಶಕ್ತಿಚಾಲಿತ ಸಸ್ಯ ಸಂರಕ್ಷಣಾ ಉಪಕರಣಗಳು, ಅಂತರ ಬೇಸಾಯ ಉಪಕರಣಗಳು, ತ್ಯಾಜ್ಯ ವಸ್ತುಗಳ ನಿರ್ವಹಣಾ ಉಪಕರಣಗಳು, ಕೊಯಿಲು ಮತ್ತು ಒಕ್ಕಣೆ ಮಾಡುವ ಉಪಕರಣಗಳು ಕೃಷಿ ಸಂಸ್ಕರಣಾ ಘಟಕಗಳು ಹಾಗೂ ಡೀಸಲ್ ಪಂಪ್ ಸೆಟ್‌ಗಳನ್ನು ಸಾಮಾನ್ಯ ರೈತರಿಗೆ ಶೇ.50 ರಷ್ಟು ಸಹಾಯಧನ ಹಾಗು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ರೈತರಿಗೆ ಶೇ.90 ರಷ್ಟು ಸಹಾಯಧನವನ್ನು ಗರಿಷ್ಠ ಮಿತಿ ರೂ. ಒಂದು ಲಕ್ಷದವರೆಗೆ ನೀಡಲಾಗಿರುತ್ತದೆ. ಸಣ್ಣ ಟ್ರ್ಯಾಕ್ಟರ್‌ಗಳ ಖರೀದಿಗೆ ಪರಿಶಿಷ್ಟ ಜಾತಿ/ ಪಂಗಡದ ರೈತರಿಗೆ ರೂ.3.00ಲಕ್ಷ ಹಾಗು ಸಾಮಾನ್ಯ ರೈತರಿಗೆ ರೂ.0.75ಲಕ್ಷಗಳಂತೆ ಗರಿಷ್ಠ ಸಹಾಯಧನವನ್ನು ನೀಡಲಾಗಿರುತ್ತದೆ. |
| 11. | ಕೃಷಿ ಯಂತ್ರಧಾರೆ | ರಾಜ್ಯದಲ್ಲಿ ಸಣ್ಣ ಮತ್ತು ಅತಿಸಣ್ಣ ರೈತರಿಗೆ ಸಕಾಲದಲ್ಲಿ ಕೃಷಿ ಚಟುವಟಿಕೆಗಳನ್ನು ಕೈಗೊಳ್ಳಲು ಅನುವಾಗುವಂತೆ, ಕಡಿಮೆ ಬಾಡಿಗೆ ದರದಲ್ಲಿ ಭೂಮಿ ಸಿದ್ಧತೆಯಿಂದ ಕೊಯ್ಲು ಮತ್ತು ಸಂಸ್ಕರಣೆಗೆ ಉಪಯುಕ್ತವಾಗುವ ವಿವಿಧ ಕೃಷಿ ಯಂತ್ರೋಪಕರಣಗಳನ್ನು ರೈತರಿಗೆ ಬಾಡಿಗೆ ಆಧಾರದ ಮೇಲೆ ಉಪಯೋಗಿಸಲು ಅವಕಾಶ ಕಲ್ಪಿಸಲು ಹೋಬಳಿ ಕೇಂದ್ರಗಳಲ್ಲಿ ಆಯ್ದ ಸಂಸ್ಥೆಗಳ ಸಹಯೋಗದೊಂದಿಗೆ 697 ಕೃಷಿ ಯಂತ್ರಧಾರೆ (ಕೃಷಿ ಯಂತ್ರೋಪಕರಣಗಳ ಬಾಡಿಗೆ ಆಧಾರಿತ ಸೇವಾ) ಕೇಂದ್ರಗಳನ್ನು ಸ್ಥಾಪಿಸಲಾಗಿರುತ್ತದೆ. |
| 12. | ತರಬೇತಿ ಕಾರ್ಯಕ್ರಮಗಳು | ಈ ಯೋಜನೆಯಡಿ ಕೃಷಿ ವಿಸ್ತರಣಾ ಅಧಿಕಾರಿಗಳ ನಿರ್ವಹಣಾ ಸಾಮರ್ಥ್ಯ ಮತ್ತು ರೈತರ/ ರೈತ ಮಹಿಳೆಯರ ವೃತ್ತಿ ಸಾಮರ್ಥ್ಯವನ್ನು ಹೆಚ್ಚಿಸಲು ಕೃಷಿ ತಾಂತ್ರಿಕತೆಗಳಿಗೆ ಸಂಬಂಧಿಸಿದಂತೆ ವಿಶೇಷ ತರಬೇತಿಗಳನ್ನು ಹಾಗೂ ಅಧ್ಯಯನ ಪ್ರವಾಸಗಳನ್ನು ಆಯೋಜಿಸಲಾಗಿರುತ್ತದೆ. |

| | | |
|---|---|---|
| 13. | ರಾಷ್ಟ್ರೀಯ ಆಹಾರ ಭದ್ರತಾ ಅಭಿಯಾನ & ರಾಷ್ಟ್ರೀಯ ಖಾದ್ಯ ತೈಲ ಅಭಿಯಾನ-ಎಣ್ಣೆಕಾಳು | ಈ ಯೋಜನೆಯಡಿ ಅಕ್ಕಿ, ದ್ವಿದಳಧಾನ್ಯ, ನೂಟ್ರಿ ಸಿರಿಧಾನ್ಯ, ಎಣ್ಣೆಕಾಳು, ಕಬ್ಬು ಮತ್ತು ಹತ್ತಿ ಬೆಳೆಗಳ ಉತ್ಪಾದನೆಯನ್ನು ಹೆಚ್ಚಿಸಲು ಆಧುನಿಕ ತಾಂತ್ರಿಕತೆಗಳ ಗುಚ್ಛ ಪ್ರಾತ್ಯಕ್ಷಿಕೆಗಳನ್ನು ಆಯೋಜಿಸುವುದರ ಜೊತೆಗೆ ಬಿತ್ತನೆ ಬೀಜ, ಲಘುಪೋಷಕಾಂಶಗಳು, ಜೈವಿಕ ಗೊಬ್ಬರಗಳು, ಸಸ್ಯ ಸಂರಕ್ಷಣಾ ರಾಸಾಯನಿಕಗಳು, ಜಿಪ್ಸಂ/ ಕೃಷಿ ಸುಣ್ಣ, ಕೃಷಿ ಉಪಕರಣಗಳು, ನೀರು ಒದಗಿಸುವ ಪೈಪ್ ಘಟಕಗಳ ಅಳವಡಿಕೆಗೆ ಶೇ.50ರ ಸಹಾಯಧನವನ್ನು ನೀಡಲಾಗಿರುತ್ತದೆ. |
| 14. | ಸಸ್ಯ ಸಂರಕ್ಷಣೆ | ಶೇ.50ರ ರಿಯಾಯಿತಿಯಲ್ಲಿ ಸಸ್ಯ ಸಂರಕ್ಷಣಾ ಪೀಡೆನಾಶಕಗಳನ್ನು ವಿತರಣೆ ಮಾಡಲಾಗಿರುತ್ತದೆ. |
| 15. | ಮಣ್ಣಿನ ಸತ್ವ ಹೆಚ್ಚಿಸುವಿಕೆ ಯೋಜನೆ | ಎರೆಹುಳು ಗೊಬ್ಬರ, ಸಾವಯವ ಗೊಬ್ಬರ, ರಂಜಕಯುಕ್ತ ಸಾವಯವ ಗೊಬ್ಬರ, ಸಿಟಿ ಕಾಂಪೋಸ್ಟ್ ರಿಯಾಯತಿ ದರದಲ್ಲಿ ವಿತರಣೆ ಮಾಡುವುದು. ಸಾಮಾನ್ಯ ವರ್ಗದ ರೈತರಿಗೆ ಶೇ.50ರ ಸಹಾಯಧನ ಹಾಗೂ ಪರಿಶಿಷ್ಟ ಜಾತಿ/ ಪಂಗಡದ ರೈತರಿಗೆ ಶೇ.75ರ ಸಹಾಯಧನ ನೀಡಲಾಗಿರುತ್ತದೆ. |
| 16. | ಸಾವಯವ ಇಂಗಾಲ ಹೆಚ್ಚಿಸುವ ಅಭಿಯಾನ | ವಿವಿಧ ದ್ವಿದಳ ಧಾನ್ಯ ಬೀಜಗಳು ಮತ್ತು ಹಸಿರೆಲೆ ಗೊಬ್ಬರ ಬೀಜಗಳನ್ನು ಸಾಮಾನ್ಯ ವರ್ಗ ಹಾಗೂ ಪರಿಶಿಷ್ಟ ಜಾತಿ/ ಪಂಗಡದ ರೈತರಿಗೆ ಶೇ.75ರ ಸಹಾಯಧನ ನೀಡಲಾಗಿರುತ್ತದೆ. |
| 17. | ಕೃಷಿ ವಿಸ್ತರಣಾ ಉಪ ಅಭಿಯಾನ (SAME-ATMA) | ಯೋಜನೆಯಡಿ ಆಯೋಜಿಸುವ ವಿಸ್ತರಣಾ ಕಾರ್ಯಕ್ರಮಗಳ ಚಟುವಟಿಕೆಗಳಲ್ಲಿ ಎಲ್ಲಾ ವರ್ಗದ ರೈತರು / ರೈತ ಮಹಿಳೆಯರ ಪಾಲ್ಗೊಳ್ಳುವಿಕೆಯಲ್ಲಿ ಅವಕಾಶ ಕಲ್ಪಿಸಲಾಗಿರುತ್ತದೆ. |
| 18. | ಮಣ್ಣಿನ ಫಲವತ್ತತೆ ಯೋಜನೆ | 2022-23ನೇ ಸಾಲಿನಲ್ಲಿ ಮಣ್ಣು ಮಾದರಿಗಳನ್ನು ಸಂಗ್ರಹಿಸಿ, ವಿಶ್ಲೇಷಿಸಿ ಸಂಬಂಧಿಸಿದ ರೈತರಿಗೆ ಮಣ್ಣು ಪರೀಕ್ಷಾ ವರದಿಯನ್ನು ವಿತರಿಸಲಾಗಿರುತ್ತದೆ. |
| 19. | ರಾಷ್ಟ್ರೀಯ ಕೃಷಿ ವಿಕಾಸ್ ಯೋಜನೆಯಡಿ ಸಮಗ್ರ ಕೃಷಿ ಪದ್ಧತಿಯ ವಿಸ್ತರಣೆ ಹಾಗೂ ಜನಪ್ರಿಯಗೊಳಿಸುವ ಕಾರ್ಯಕ್ರಮ | ಕೃಷಿ ಮತ್ತು ಕೃಷಿ ಸಂಬಂಧಿತ ಚಟುವಟಿಕೆಗಳಾದ ತೋಟಗಾರಿಕೆ ಹಾಗೂ ಪಶುಸಂಗೋಪನೆಗಳನ್ನು ಒಗ್ಗೂಡಿಸಿ "ಸಮಗ್ರ ಕೃಷಿ ಪದ್ಧತಿ "ಮೂಲಕ ರೈತನ ಆದಾಯ ಹೆಚ್ಚಳ ಮಾಡುವುದು ಹಾಗೂ ಅಳವಡಿಸಿದ ಪ್ರದೇಶದಲ್ಲಿ/ ಜಮೀನಿನಲ್ಲಿ ಬೆಳೆ ಉತ್ಪಾದಕತೆ, ಸುಸ್ಥಿರತೆ, ಸಮತೋಲನ ಆಹಾರ ಉತ್ಪಾದನೆ, ತ್ಯಾಜ್ಯಗಳ ಮರುಬಳಕೆ ಹಾಗೂ ವರ್ಷಪೂರ್ತಿ ಆದಾಯ ಹೆಚ್ಚಿಸುವ ಉದ್ದೇಶದಿಂದ ಸಮಗ್ರ ಕೃಷಿ ಪದ್ಧತಿ ಮಾದರಿಗಳ ಅನುಷ್ಠಾನಕ್ಕೆ ಸಹಾಯಧನ ನೀಡಲಾಗಿರುತ್ತದೆ. |

| | | |
|---|---|---|
| 20. | ಪ್ರಧಾನ ಮಂತ್ರಿ ಕಿರು ಆಹಾರ ಸಂಸ್ಕರಣಾ ಉದ್ದಿಮೆಗಳ ನಿಯಮಬದ್ಧಗೊಳಿಸುವಿಕೆ ಯೋಜನೆ | ಅಸಂಘಟಿತ ವಲಯದಲ್ಲಿರುವ ಸೂಕ್ಷ್ಮ/ ಕಿರು ಆಹಾರ ಸಂಸ್ಕರಣ ಉದ್ದಿಮೆಗಳನ್ನು ಪ್ರೋತ್ಸಾಹಿಸಿ ಅವುಗಳ ಸ್ಪರ್ಧಾತ್ಮಕತೆಯನ್ನು ಹೆಚ್ಚಿಸುವುದು ಮತ್ತು ಅವುಗಳನ್ನು ಸಂಘಟಿತ ವಲಯಕ್ಕೆ ತರುವುದು ಹಾಗೂ ರೈತ ಉತ್ಪಾದಕ ಸಂಸ್ಥೆಗಳು, ಸ್ವಸಹಾಯ ಸಂಘಗಳು ಹಾಗೂ ಉತ್ಪಾದಕ ಸಹಕಾರಿ ಸಂಘಗಳಿಗೆ ಅವುಗಳ ಸರಪಳಿಕೊಂಡಿಯೊಂದಿಗೆ ಉತ್ತೇಜನ ನೀಡಲು ಕೇಂದ್ರ ಸರ್ಕಾರದ ಮಾರ್ಗಸೂಚಿಯನ್ವಯ ಯೋಜನೆಯ ಅನುಷ್ಠಾನಕ್ಕಾಗಿ ರಾಜ್ಯದ ಪಾಲಿನ ಅನುದಾನವನ್ನು ಒದಗಿಸಲಾಗಿರುತ್ತದೆ. |
| 21. | ರೈತ ಶಕ್ತಿ ಕಾರ್ಯಕ್ರಮ | ಕೃಷಿ ಯಂತ್ರೋಪಕರಣಗಳ ಬಳಕೆಯನ್ನು ಪ್ರೋತ್ಸಾಹಿಸಲು ಹಾಗೂ ಇಂಧನ ವೆಚ್ಚದ ಭಾರವನ್ನು ಕಡಿಮೆ ಮಾಡಲು ಪ್ರತಿ ಎಕರೆಗೆ ರೂ.250/- ಗಳಂತೆ ಗರಿಷ್ಠ ಐದು ಎಕರೆಗೆ ರೈತರಿಗೆ ಡಿ.ಬಿ.ಟಿ ಮೂಲಕ ಡೀಸೆಲ್ ಸಹಾಯಧನವನ್ನು "ರೈತ ಶಕ್ತಿ" ಯೋಜನೆಯಲ್ಲಿ ನೀಡಲಾಗಿರುತ್ತದೆ. |

ಉಪ ಕೃಷಿ ನಿರ್ದೇಶಕರು
(ಯೋಜನೆ)

LCQ 563

ಅನುಬಂಧ 1ಆ

## 2023-24ನೇ ಸಾಲಿನಲ್ಲಿ ರಾಜ್ಯದ ರೈತರ ಕಲ್ಯಾಣಕ್ಕಾಗಿ ರೂಪಿಸಿರುವ ಯೋಜನೆಗಳ ವಿವರಗಳು

1. **ಬೀಜಗಳ ಪೂರೈಕೆ:** ಕೃಷಿ ಇಲಾಖೆಯ ಬೀಜಗಳ ಪೂರೈಕೆ ಮತ್ತು ಇತರೆ ಹೂಡುವಳಿ ಯೋಜನೆಯಡಿ ರಾಜ್ಯದ ಎಲ್ಲಾ ವರ್ಗದ ರೈತರಿಗೆ ವಿವಿಧ ಕೃಷಿ ಬೆಳೆಗಳ (ಭತ್ತ, ರಾಗಿ, ಜೋಳ, ಮುಸುಕಿನ ಜೋಳ, ಸಜ್ಜೆ, ತೊಗರಿ, ಕಡಲೆ, ಹೆಸರು, ಉದ್ದು, ಅಲಸಂದೆ, ನೆಲಗಡಲೆ, ಸೂರ್ಯಕಾಂತಿ, ಸೋಯಾ ಅವರೆ, ಹತ್ತಿ ಇತ್ಯಾದಿ) ಪ್ರಮಾಣಿತ/ ನಿಜ ಚೀಟಿ ಬಿತ್ತನೆ ಬೀಜಗಳನ್ನು ಸಾಮಾನ್ಯ ವರ್ಗದ ರೈತರಿಗೆ ಶೇ. 50 ಹಾಗೂ ಪರಿಶಿಷ್ಟ ಜಾತಿ/ ಪಂಗಡದ ರೈತರಿಗೆ ಶೇ.75 ರ ರಿಯಾಯಿತಿ ದರದಲ್ಲಿ ವಿತರಣೆ ಮಾಡಲಾಗುತ್ತಿದೆ. ಒಟ್ಟಾರೆ ಗರಿಷ್ಠ 2.00 ಹೆಕ್ಟೇರ್ ಅಥವಾ ಅವರ ವಾಸ್ತವಿಕ ಹಿಡುವಳಿ (Actual holding) ಯಾವುದು ಕಡಿಮೆಯೋ ಆ ವಿಸ್ತೀರ್ಣಕ್ಕೆ ಮಾತ್ರ ರಿಯಾಯಿತಿಯಲ್ಲಿ ಬಿತ್ತನೆ ಬೀಜ ವಿತರಣೆ ಮಾಡಲಾಗುತ್ತಿದೆ.

2. **ಸಸ್ಯ ಸಂರಕ್ಷಣೆ:** ಶೇ.50**ರ** ರಿಯಾಯಿತಿ ದರದಲ್ಲಿ ಪೀಡೆನಾಶಕ/ ಜೈವಿಕ ಪೀಡೆನಾಶಕ ಹಾಗೂ ಜೈವಿಕ ನಿಯಂತ್ರಣಕಾರಕಗಳ ವಿತರಣೆ, ಬೀಜೋಪಚಾರ ಆಂದೋಲನ ಹಾಗೂ ಸುರಕ್ಷಿತ ಕೀಟನಾಶಕಗಳ ಬಳಕೆ ಬಗ್ಗೆ ತರಬೇತಿಗಾಗಿ ಅನುದಾನವನ್ನು ಬಳಸಿಕೊಳ್ಳಲಾಗುತ್ತಿದೆ.

3. **ಕೃಷಿ ಯಾಂತ್ರೀಕರಣ & ಕೃಷಿ ಸಂಸ್ಕರಣೆ:**
   *ಕೃಷಿ ಯಾಂತ್ರೀಕರಣ:* ರೈತರು ಸಕಾಲದಲ್ಲಿ ಕೃಷಿ ಚಟುವಟಿಕೆಗಳನ್ನು ಕೈಗೊಳ್ಳುವುದಕ್ಕೆ ಅನುವು ಮಾಡಿಕೊಡಲು ಹಾಗೂ ಕೂಲಿ ಕಾರ್ಮಿಕರ ಮೇಲಿನ ಅವಲಂಬನೆಯನ್ನು ಕಡಿಮೆ ಮಾಡಲು, ಸದರಿ ಕೃಷಿ ಯಾಂತ್ರೀಕರಣ ಯೋಜನೆಯಡಿ ಕೃಷಿ ಯಂತ್ರೋಪಕರಣಗಳಿಗೆ ಸಾಮಾನ್ಯ ವರ್ಗದ ರೈತರಿಗೆ ಶೇ.50 ಹಾಗೂ ಪ.ಜಾ./ಪ.ಪಂ. ರೈತರಿಗೆ ಶೇ.90 ರಂತೆ ಎಲ್ಲಾ ವರ್ಗದ ರೈತರಿಗೆ ಗರಿಷ್ಠ ರೂ.1.00 ಲಕ್ಷಕ್ಕೆ ಮಿತಿಗೊಳಪಟ್ಟು ಸಹಾಯಧನವನ್ನು ಒದಗಿಸಲಾಗುತ್ತಿದೆ ಹಾಗೂ 45 ಪಿ.ಟಿ.ಒ ಹೆಚ್.ಪಿ ವರೆಗಿನ ಟ್ರಾಕ್ಟರ್ ಗಳಿಗೆ ಸಾಮಾನ್ಯ ವರ್ಗದ ರೈತರಿಗೆ ರೂ.0.75 ಲಕ್ಷ ಹಾಗೂ ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದ ರೈತರಿಗೆ ಶೇ.90 ರ ಗರಿಷ್ಠ ರೂ.3.00 ಲಕ್ಷ ಸಹಾಯಧನ ನೀಡಲಾಗುತ್ತಿದೆ.

   *ಕೃಷಿ ಸಂಸ್ಕರಣೆ:* ಕೃಷಿ ಉತ್ಪನ್ನಗಳ ಸಂಸ್ಕರಣೆ ಯೋಜನೆಯಡಿ ಕೃಷಿ ಸಂಸ್ಕರಣಾ ಘಟಕಗಳು, ಟಾರ್ಪಾಲಿನ್ ಮತ್ತು ಸಣ್ಣ ಯಂತ್ರಚಾಲಿತ ಎಣ್ಣೆಗಾಣ ಘಟಕಗಳನ್ನು ಸಹಾಯಧನದಡಿ ರೈತರಿಗೆ ವಿತರಿಸಲಾಗುತ್ತಿದೆ. ಸದರಿ ಯೋಜನೆಯಡಿ ಕೃಷಿ ಸಂಸ್ಕರಣಾ ಘಟಕಗಳು ಮತ್ತು ಟಾರ್ಪಾಲಿನ್ ಗಳನ್ನು ಸಾಮಾನ್ಯ ವರ್ಗದ ರೈತರಿಗೆ ಶೇ.50ರಷ್ಟು ಮತ್ತು ಪರಿಶಿಷ್ಟ ಜಾತಿ/ ಪಂಗಡದ ರೈತರಿಗೆ ಶೇ.90ರಷ್ಟು ಸಹಾಯಧನದಡಿ ನೀಡಲಾಗುವುದು. ಸಣ್ಣ ಯಂತ್ರಚಾಲಿತ ಎಣ್ಣೆಗಾಣ ಘಟಕಗಳನ್ನು ಸಾಮಾನ್ಯ ವರ್ಗದ ರೈತರಿಗೆ ಶೇ.75 ಹಾಗೂ ಪ.ಜಾ./ಪ.ಪಂ., ರೈತರಿಗೆ ಶೇ.90 ರಂತೆ ಎಲ್ಲಾ ವರ್ಗದ ರೈತರಿಗೆ ಗರಿಷ್ಠ ರೂ.1.00 ಲಕ್ಷಕ್ಕೆ ಮಿತಿಗೊಳಪಟ್ಟು ಸಹಾಯಧನವನ್ನು ಒದಗಿಸಲಾಗುತ್ತಿದೆ.

4. **ರೈತ ಸಿರಿ & ಸಾವಯವ ಕೃಷಿ:** ಸಾವಯವ ಕೃಷಿ ಅಳವಡಿಕೆ ಮತ್ತು ದೃಡೀಕರಣ ಕಾರ್ಯಕ್ರಮದಡಿ ರಾಜ್ಯದ ಸಾವಯವ ಪ್ರಮಾಣೀಕೃತ ಪ್ರದೇಶವನ್ನು ವಿಸ್ತರಿಸುವ ನಿಟ್ಟಿನಲ್ಲಿ ಆಸಕ್ತ ಗುಂಪು ಮತ್ತು ವ್ಯಕ್ತಿಗತ ಪ್ರಸ್ತಾವನೆಗಳ ಪ್ರಮಾಣೀಕರಣಕ್ಕಾಗಿ ಅನುದಾನ ಬಳಕೆ ಮಾಡಲಾಗುತ್ತದೆ.

ರೈತ ಸಿರಿ ಕಾರ್ಯಕ್ರಮದಡಿ ರಾಜ್ಯದಲ್ಲಿ ಸಿರಿಧಾನ್ಯಗಳ ಉತ್ಪಾದನೆಯನ್ನು ಪ್ರೋತ್ಸಾಹಿಸಲು ಮತ್ತು ರೈತರ ಆದಾಯವನ್ನು ಹೆಚ್ಚಿಸಲು ಸಿರಿಧಾನ್ಯಗಳಾದ ನವಣೆ, ಹಾರಕ, ಕೊರಲೆ, ಸಾಮೆ, ಊದಲು, ಬರಗು ಬೆಳೆಗಳನ್ನು ಬೆಳೆದ ಎಲ್ಲಾ ವರ್ಗದ ರೈತರಿಗೆ ಪ್ರತಿ ಹೆಕ್ಟೇರಿಗೆ ರೂ.10000/-ದಂತೆ ಗರಿಷ್ಠ ಎರಡು ಹೆಕ್ಟೇರುಗಳಿಗೆ ಸಿರಿಧಾನ್ಯಗಳನ್ನು ಬೆಳೆದ ರೈತರುಗಳಿಗೆ ಬೆಳೆ ಸಮೀಕ್ಷೆ ಆಧಾರದಂತೆ ಪ್ರೋತ್ಸಾಹಧನವನ್ನು ನೇರ ನಗದು ವರ್ಗಾವಣೆ ಮೂಲಕ ನೀಡಲಾಗುವುದು ಹಾಗೂ ಸಾವಯವ ಮತ್ತು ಸಿರಿಧಾನ್ಯಗಳ ಉತ್ತೇಜನ ಕಾರ್ಯಕ್ರಮಗಳನ್ನು ಆಯೋಜಿಸಲಾಗುವುದು.

5. **ಸಾವಯವ ಇಂಗಾಲ ಅಭಿಯಾನ:** ರಾಜ್ಯದ ಕೃಷಿ ಭೂಮಿಯಲ್ಲಿ ಸಾವಯವ ಇಂಗಾಲದ ಪ್ರಮಾಣವನ್ನು ಹೆಚ್ಚಿಸಲು, ದ್ವಿದಳಧಾನ್ಯಗಳ ವಿಸ್ತೀರ್ಣ ಮತ್ತು ಉತ್ಪಾದನೆ ಹೆಚ್ಚಿಸುವ ಸಲುವಾಗಿ ಶೇ. 75ರ ರಿಯಾಯಿತಿ ದರದಲ್ಲಿ ಹಸಿರೆಲೆ ಗೊಬ್ಬರ ಬಿತ್ತನೆ ಬೀಜಗಳ ವಿತರಣೆ ಮಾಡಲಾಗುವುದು ಹಾಗೂ ಹಸಿರೆಲೆ ಗೊಬ್ಬರ ಬೀಜ ಮತ್ತು ಸಾವಯವ ಗೊಬ್ಬರಗಳ ಬಳಕೆಯಿಂದ ಸಾವಯವ ಇಂಗಾಲ ಹೆಚ್ಚಿಸುವ ಕುರಿತು ಪ್ರಾತ್ಯಕ್ಷಿಕೆಗಳನ್ನು (ಪ್ರತಿ ಪ್ರಾತ್ಯಕ್ಷಿಕೆಗೆ ರೂ. 2500/-) ಆಯೋಜಿಸಲಾಗುತ್ತಿದೆ.

6. **ಹೊಸ ಬೆಳೆ ವಿಮಾ ಯೋಜನೆ:** ಈ ಯೋಜನೆಯಡಿ ಪ್ರಕೃತಿ ವಿಕೋಪಗಳು, ಕೀಟಗಳು ಮತ್ತು ರೋಗಗಳಿಂದಾಗಿ ಯಾವುದೇ ಅಧಿಸೂಚಿತ ಬೆಳೆ ವಿಫಲವಾದ ಪಕ್ಷದಲ್ಲಿ ರೈತರಿಗೆ ವಿಮಾ ರಕ್ಷಣೆ ಮತ್ತು ಹಣಕಾಸು ಬೆಂಬಲ ನೀಡಲಾಗುವುದು. ರೈತರಿಗೆ ನೀಡುವ ವಿಮಾ ಕಂತಿನ ರಿಯಾಯಿತಿಯಲ್ಲಿ ರಾಜ್ಯ ಸರ್ಕಾರದ ಪಾಲನ್ನು ನೀಡಿ ಬೆಳೆ ವಿಮಾ ನಷ್ಟ ಪರಿಹಾರವನ್ನು ಇತ್ಯರ್ಥಪಡಿಸಲು ಅನುವು ಮಾಡಲಾಗುತ್ತಿದೆ.

ಈ ಯೋಜನೆಯಡಿ ಮುಖ್ಯ ಬೆಳೆಗಳನ್ನು ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಹಾಗೂ ಇತರೆ ಬೆಳೆಗಳನ್ನು ಹೋಬಳಿ ಮಟ್ಟದಲ್ಲಿ ಪ್ರಥಮವಾಗಿ ಅಧಿಸೂಚಿಸಲಾಗುತ್ತದೆ. ಅಂತಿಮ ದಿನಾಂಕದೊಳಗೆ ರೈತರಿಂದ ಪ್ರೀಮಿಯಂ ಪಡೆದು ಬ್ಯಾಂಕ್ / ಸಹಕಾರ ಸಂಸ್ಥೆ / ಸಾಮಾನ್ಯ ಸೇವಾ ಕೇಂದ್ರಗಳಲ್ಲಿ ಬೆಳೆ ವಿಮೆ ನೋಂದಣಿ ಕಾರ್ಯ ಕೈಗೊಳ್ಳಲಾಗುತ್ತದೆ ದಾಖಲೆಗಳನ್ನು ಪರಿಶೀಲಿಸಿ ಅರ್ಹ ರೈತರ ಪ್ರಸ್ತಾವನೆಗಳನ್ನು ಸಂಬಂಧಿಸಿದ ವಿಮಾ ಸಂಸ್ಥೆಗಳಿಗೆ ಅಂಗೀಕರಿಸಲು ರವಾನಿಸಲಾಗುತ್ತದೆ. ಕರ್ನಾಟಕ ರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ್ ಬಿಮಾ ಯೋಜನೆಯು ಕ್ಷೇತ್ರಾಧಾರಿತ ಹಾಗೂ ಇಳುವರಿ ಆಧಾರಿತ ಯೋಜನೆಯಾಗಿದ್ದು, ಮಾರ್ಗಸೂಚಿಯನುಸಾರ ಹೋಬಳಿ / ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಆರ್ಥಿಕ ಮತ್ತು ಸಾಂಖ್ಯಿಕ ಇಲಾಖೆಯವರು ನೀಡುವ ಬೆಳೆ ಕಟಾವು ಪ್ರಯೋಗಗಳಿಂದ ಬಂದಂತಹ ವಾಸ್ತವಿಕ ಇಳುವರಿ ಮಾಹಿತಿಯು ನಿಗದಿಪಡಿಸಲಾದ ಪ್ರಾರಂಭಿಕ ಇಳುವರಿಗಿಂತ ಕಡಿಮೆ ಇದ್ದರೆ, ಇಳುವರಿಯ ಕೊರತೆಗನುಗುಣವಾಗಿ ಹೋಬಳಿ/ ಗ್ರಾಮ ಪಂಚಾಯಿತಿಯಲ್ಲಿ ಬೆಳೆ ವಿಮೆ ಮಾಡಿಸಿದ ಎಲ್ಲಾ ರೈತರು ಬೆಳೆ ವಿಮಾ ನಷ್ಟ ಪರಿಹಾರ ಪಡೆಯಲು ಅರ್ಹರಾಗುತ್ತಾರೆ. ಅರ್ಹ ರೈತರಿಗೆ ವಿಮೆ ಪರಿಹಾರ ಮೊತ್ತವನ್ನು ನೇರವಾಗಿ ಅವರ ಬ್ಯಾಂಕ್ ಖಾತೆಗಳಿಗೆ ವಿಮಾ ಸಂಸ್ಥೆಯವರು ವರ್ಗಾಯಿಸುತ್ತಾರೆ.

7. **ಬೆಳೆ ಸಮೀಕ್ಷೆ:** ಪೂರ್ವ ಮುಂಗಾರು, ಮುಂಗಾರು, ಹಿಂಗಾರು ಮತ್ತು ಬೇಸಿಗೆ ಹಂಗಾಮುಗಳಲ್ಲಿ ಬೆಳೆ ಸಮೀಕ್ಷೆ ಕೈಗೊಂಡ ಖಾಸಗಿ ನಿವಾಸಿಗಳಿಗೆ ಕೇಂದ್ರೀಕೃತ DBT k2 ಮೂಲಕ ಆಧಾರ್ ಆಧಾರಿತ ನೇರ ಗೌರವಧನ ಪಾವತಿ, ಮಾಸ್ಟರ್ ತರಬೇತುದಾರರು ಹಾಗೂ ಜಿಲ್ಲಾ ತಾಂತ್ರಿಕ ಸಲಹೆಗಾರರ ಗೌರವಧನ, ಬೆಳೆ ಸಮೀಕ್ಷೆ ಕುರಿತು ತರಬೇತಿ, ಕಾರ್ಯಾಗಾರ ಆಯೋಜನೆ, ವಿವಿಧ ಮಾಧ್ಯಮಗಳ ಮೂಲಕ ಜಾಹೀರಾತು, ಮುದ್ರಣ, ಸಿ.ಡಿ. ದಾಖಲಾತಿ, ವಿದ್ಯುನ್ಮಾನ ಮತ್ತು ವಿವಿಧ ಮಾಧ್ಯಮಗಳ ಮುಖಾಂತರ ಪ್ರಚಾರಕ್ಕಾಗಿ ತಗಲುವ ವೆಚ್ಚ,

ಹೆಲ್ಪ್ ಡೆಸ್ಕ್ ಸಿಬ್ಬಂದಿ ವೇತನ ಹಾಗೂ ತಂತ್ರಾಂಶ ನಿರ್ವಹಣೆ ವೆಚ್ಚ, ಶೇ. 1ರಷ್ಟು ದತ್ತಾಂಶದ ಪರಿಶೀಲನೆ ಕೈಗೊಳ್ಳುವ ಆರ್ಥಿಕ ಮತ್ತು ಸಾಂಖ್ಯಿಕ ಇಲಾಖೆ ಸಿಬ್ಬಂದಿಗಳಿಗೆ ಗೌರವಧನ, ಬೆಳೆ ಸಮೀಕ್ಷೆ ಕಾರ್ಯತಂಡ ನಿರ್ವಹಣೆ, ಇತರೆ ಕಛೇರಿ ಮತ್ತು ಆಡಳಿತಾತ್ಮಕ ವೆಚ್ಚಕ್ಕಾಗಿ ಉಪಯೋಗಿಸಲಾಗುತ್ತದೆ.

8. **ಮುಖ್ಯಮಂತ್ರಿಗಳ ರೈತ ವಿದ್ಯಾನಿಧಿ:** ಎಸ್.ಎಸ್.ಎಲ್.ಸಿ/ 10ನೇ ತರಗತಿಯನ್ನು ಪೂರೈಸಿರುವ ಹಾಗೂ ರಾಜ್ಯದ ಯಾವುದೇ ಭಾಗದಲ್ಲಿ ಅಧಿಕೃತವಾಗಿ ನೋಂದಣಿಯಾಗಿರುವ ಶಿಕ್ಷಣ ಸಂಸ್ಥೆ/ ವಿಶ್ವವಿದ್ಯಾನಿಲಯಗಳಲ್ಲಿ ಸ್ನಾತಕೋತ್ತರ ಕೋರ್ಸ್ ಗಳವರೆಗೆ ವಿದ್ಯಾಭ್ಯಾಸ ಮಾಡುತ್ತಿರುವ ರೈತರ ಹಾಗೂ ಪೌಢಶಾಲಾ ಶಿಕ್ಷಣ ಪಡೆಯುತ್ತಿರುವ ರೈತ ಕುಟುಂಬದ ಹೆಣ್ಣು ಮಕ್ಕಳಿಗೆ ಹಾಗೂ ಭೂರಹಿತ ಕೃಷಿ ಕಾರ್ಮಿಕರ ಮಕ್ಕಳಿಗೆ ವಿದ್ಯಾರ್ಥಿ ವೇತನವನ್ನು ಬ್ಯಾಂಕ್ ಖಾತೆಗಳಿಗೆ ನೇರ ನಗದು ವರ್ಗಾವಣೆ ಮಾಡಲಾಗುತ್ತದೆ. ಪುನರಾವರ್ತಿತ ವಿದ್ಯಾರ್ಥಿಗಳು ಹಾಗೂ ಇತರೆ ಯಾವುದೇ ಇಲಾಖೆಯು ನೀಡುವ ವಿದ್ಯಾರ್ಥಿ ವೇತನ ಪಡೆಯುತ್ತಿರುವ ವಿದ್ಯಾರ್ಥಿಗಳು 'ಮುಖ್ಯಮಂತ್ರಿ ರೈತ ವಿದ್ಯಾನಿಧಿ' ವಿದ್ಯಾರ್ಥಿವೇತನ ಪಡೆಯಲು ಅರ್ಹರಿರುವುದಿಲ್ಲ.

9. **ಕೃಷಿ ಪ್ರಶಸ್ತಿ ಮತ್ತು ಕೃಷಿ ಪಂಡಿತ ಪ್ರಶಸ್ತಿ:**

*ಕೃಷಿ ಪಂಡಿತ ಪ್ರಶಸ್ತಿ:* ಕೃಷಿ ಕ್ಷೇತ್ರದಲ್ಲಿ ವಿನೂತನ ಅನ್ವೇಷಣೆ ಮತ್ತು ಸೃಜನಾತ್ಮಕ ಕಾರ್ಯಗಳಿಂದ ಗಮನಾರ್ಹ ಸಾಧನೆ ಮಾಡಿರುವ ಮತ್ತು ರೈತ ಸಮುದಾಯದ ಅಭಿವೃದ್ಧಿಗಾಗಿ ಕೊಡುಗೆ ನೀಡುತ್ತಿರುವ ರೈತ ಮತ್ತು ರೈತ ಮಹಿಳೆಯರಿಗೆ ಕೃಷಿ ಪಂಡಿತ ಪ್ರಶಸ್ತಿ ನೀಡಲಾಗುತ್ತಿದೆ.

*ಕೃಷಿ ಪ್ರಶಸ್ತಿ:* ಕೃಷಿ ಕ್ಷೇತ್ರದಲ್ಲಿ ಉತ್ಪಾದನೆ ಮತ್ತು ಉತ್ಪಾದಕತೆಯನ್ನು ಹೆಚ್ಚಿಸಲು ರೈತರಲ್ಲಿ ಆರೋಗ್ಯಕರ ಸ್ಪರ್ಧಾ ಮನೋಭಾವನೆಯನ್ನು ಉಂಟು ಮಾಡಿ ಅತಿ ಹೆಚ್ಚು ಇಳುವರಿ ಪಡೆಯುವ ರೈತ ಮತ್ತು ರೈತ ಮಹಿಳೆಯರಿಗೆ ಕೃಷಿ ಪ್ರಶಸಿಯನ್ನು ನೀಡಲಾಗುತ್ತಿದೆ.

10. **ತರಬೇತಿ ಕಾರ್ಯಕ್ರಮಗಳು:** ಈ ಯೋಜನೆಯಡಿ ಕೃಷಿ ವಿಸ್ತರಣಾ ಅಧಿಕಾರಿಗಳ ನಿರ್ವಹಣಾ ಸಾಮರ್ಥ್ಯ ಮತ್ತು ರೈತರ/ ರೈತ ಮಹಿಳೆಯರ ವೃತ್ತಿ ಸಾಮರ್ಥ್ಯವನ್ನು ಹೆಚ್ಚಿಸಲು ಕೃಷಿ ತಾಂತ್ರಿಕತೆಗಳಿಗೆ ಸಂಬಂಧಿಸಿದಂತೆ ವಿಶೇಷ ತರಬೇತಿಗಳನ್ನು ಹಾಗೂ ಅಧ್ಯಯನ ಪ್ರವಾಸಗಳನ್ನು ಆಯೋಜಿಸಲಾಗುತ್ತದೆ.

11. **ಕೃಷಿ ಭಾಗ್ಯ:** ಮಳೆಯಾಶ್ರಿತ ಕೃಷಿ ನೀತಿ, 2014 ರನ್ವಯ 2023-24 ನೇ ಸಾಲಿನಲ್ಲಿ ರಾಜ್ಯದ 5 ಒಣ ಹವಾಮಾನ ವಲಯಗಳ 24 ಬರ ಪೀಡಿತ ಜಿಲ್ಲೆಗಳಲ್ಲಿನ 106 ತಾಲ್ಲೂಕುಗಳಲ್ಲಿ ಪ್ಯಾಕೇಜ್ ಮಾದರಿಯಲ್ಲಿ ಅನುಷ್ಠಾನ ಮಾಡಲಾಗುವುದು. ರಾಜ್ಯದ ಮಳೆಯಾಶ್ರಿತ ಕೃಷಿಯನ್ನು ಸುಸ್ಥಿರ ಕೃಷಿಯನ್ನಾಗಿ ರೂಪಾಂತರಗೊಳಿಸುವುದು, ಸಮರ್ಪಕ ಮಳೆ ನೀರಿನ ಸಂಗ್ರಹಣೆ ಹಾಗೂ ಉಪಯುಕ್ತ ಬಳಕೆ ಪದ್ಧತಿಯಿಂದ ಕೃಷಿ ಉತ್ಪಾದಕತೆಯನ್ನು ಉತ್ತಮ ಪಡಿಸುವುದು ಮತ್ತು ಆದಾಯವನ್ನು ಹೆಚ್ಚಿಸುವುದು. ಮಳೆ ನೀರನ್ನು ವ್ಯರ್ಥ ಮಾಡದೆ ಆಯ್ದ ಸ್ಥಳದಲ್ಲಿ ಕೃಷಿ ಹೊಂಡ ತೆಗೆದು ಜಲ ಸಂಗ್ರಹಿಸಿ, ಬೆಳೆಗಳ ಸಂದಿಗ್ಧ ಹಂತಗಳಲ್ಲಿ ರಕ್ಷಣಾತ್ಮಕ ನೀರಾವರಿ ಒದಗಿಸುವುದು ಈ ಯೋಜನೆಯ ಉದ್ದೇಶವಾಗಿರುತ್ತದೆ. ಕೃಷಿ ಭಾಗ್ಯ ಯೋಜನೆಯಡಿ ಕ್ಷೇತ್ರ ಬದು ನಿರ್ಮಾಣ, ನೀರು ಸಂಗ್ರಹಣಾ ರಚನೆ (ಕೃಷಿ ಹೊಂಡ), ನೀರು ಇಂಗದಂತೆ ತಡೆಯಲು ಪಾಲಿಥೀನ್ ಹೊದಿಕೆ, ಕೃಷಿ ಹೊಂಡದ ಸುತ್ತಲೂ ತಂತಿ ಬೇಲಿ (GI Wire Stone Fencing), ಹೊಂಡದಿಂದ ನೀರು ಎತ್ತಲು ಡೀಸೆಲ್ /ಸೋಲಾರ್ ಪಂಪ್ ಸೆಟ್,

ನೀರನ್ನು ಬೆಳೆಗೆ ಹಾಯಿಸಲು ಸೂಕ್ಷ್ಮ(ತುಂತುರು/ಹನಿ) ನೀರಾವರಿ ಘಟಕಗಳನ್ನು ಒದಗಿಸಲು ಯೋಜಿಸಲಾಗುತ್ತಿದೆ.

2023-24 ನೇ ಸಾಲಿನಲ್ಲಿ ಸದರಿ ಯೋಜನೆಯನ್ನು ಅನುಷ್ಠಾನಗೊಳಿಸಲು ರೂ. 100 ಕೋಟಿಗಳ ಅನುದಾನವನ್ನು ಆರ್ಥಿಕ ಇಲಾಖೆಯಿಂದ ಒದಗಿಸಲಾಗುತ್ತದೆ. ಅದರಂತೆ, ಸದರಿ ಯೋಜನೆಯ ಘಟಕಗಳು/ಸಹಾಯಧನದ ವಿವರಗಳನ್ನೊಳಗೊಂಡ ಮಾರ್ಗಸೂಚಿಯನ್ನು ಸಿದ್ಧಪಡಿಸಲಾಗುತ್ತಿದೆ.

12. **ಹೈಟೆಕ್ ಹಾರ್ವೆಸ್ಟರ್ ಹಬ್**- 2023-24ನೇ ಸಾಲಿನಲ್ಲಿ 100 ಹೈಟೆಕ್ ಹಾರ್ವೆಸ್ಟರ್ ಹಬ್ ಗಳನ್ನು ಶೇ.40 ರಿಂದ ಶೇ.70 ರಷ್ಟು ಸಹಾಯಧನದಲ್ಲಿ ಕೃಷಿ ಯಂತ್ರಧಾರೆ ಕೇಂದ್ರಗಳು, ಇತರೆ ಸಂಘ-ಸಂಸ್ಥೆಗಳು ಹಾಗೂ ವೈಯಕ್ತಿಕ ಫಲಾನುಭವಿಗಳಿಗೆ ಪ್ರತಿ ಘಟಕಕ್ಕೆ ಗರಿಷ್ಠ ರೂ.100.00 ಲಕ್ಷಗಳಿಗೆ ಮೀರದಂತೆ (ಪ್ರತಿ ಘಟಕಕ್ಕೆ ರೂ.5.00 ಲಕ್ಷ ಆಡಳಿತಾತ್ಮಕ ವೆಚ್ಚ ಒಳಗೊಂಡಂತೆ) ಅನುಷ್ಠಾನ ಮಾಡಲು ಹಾಗೂ ಫಲಾನುಭವಿಗಳ ಆಯ್ಕೆ ಕುರಿತು ಸೂಕ್ತ ಮಾರ್ಗಸೂಚಿಗಳನ್ನು ಸಿದ್ಧಪಡಿಸಲಾಗುತ್ತಿದೆ.

13. **ಕೃಷಿ ನವೋದ್ಯಮ:** ಕೃಷಿ ಕ್ಷೇತ್ರದಲ್ಲಿ ಉದ್ಯಮಶೀಲತೆಯನ್ನು ಹೆಚ್ಚಿಸಲು ಹಾಗೂ ಗ್ರಾಮೀಣ ಭಾಗದ ಯುವಕರಿಗೆ ಉದ್ಯೋಗ ಸೃಜನೆಗಾಗಿ ಕೃಷಿಯಲ್ಲಿನ ನೂತನ ತಾಂತ್ರಿಕತೆಗಳು ಹಾಗೂ ನವೀನ ಪರಿಕಲ್ಪನೆಗಳ ವಾಣಿಜ್ಯೀಕರಣವನ್ನು ಉತ್ತೇಜಿಸಲು ಕೃಷಿ ನವೋದ್ಯಮ ಕಾರ್ಯಕ್ರಮವನ್ನು 2023-24ನೇ ಸಾಲಿನಲ್ಲಿ ಅನುಷ್ಠಾನ ಮಾಡಲಾಗುತ್ತದೆ. ಈ ಯೋಜನೆಯು 3 ಪ್ರಮುಖ ಘಟಕಗಳನ್ನು ಒಳಗೊಂಡಿರುತ್ತದೆ:
    - ಹೊಸ ಕೃಷಿ ನವೋದ್ಯಮಗಳಿಗೆ ಆರ್ಥಿಕ ನೆರವು: ಕೃಷಿ ಕ್ಷೇತ್ರದಲ್ಲಿ ನೂತನ ಪರಿಕಲ್ಪನೆಯೊಂದಿಗೆ ಆರಂಭಿಸುವ ಹೊಸ ನವೋದ್ಯಮಿಗಳಿಗೆ ಕನಿಷ್ಟ-ರೂ. 5.00 ಲಕ್ಷದಿಂದ ಗರಿಷ್ಟ ರೂ. 20 ಲಕ್ಷಗಳವರೆಗಿನ ಸಹಾಯಧನವನ್ನು ಪೂರ್ವನಿರ್ಧಾರಿತ ಮೈಲಿಗಲ್ಲುಗಳ ಸಾಧನೆಯ ನಂತರ ಕಂತುಗಳಲ್ಲಿ (Tranches) ನೀಡಲಾಗುವುದು.
    - ಈಗಾಗಲೇ ಸ್ಥಾಪಿಸಲಾದ ನವೋದ್ಯಮಗಳ ವಿಸ್ತರಣೆ ಅಥವಾ ಮೇಲ್ದರ್ಜೆಗೇರಿಸಲು (Accelerators) ಆರ್ಥಿಕ ನೆರವು: ಕೃಷಿ ವಲಯದಲ್ಲಿ ಈಗಾಗಲೇ ಸ್ಥಾಪಿಸಲಾದ ನವೋದ್ಯಮಗಳ ವಿಸ್ತರಣೆಗಾಗಿ ಹಾಗೂ ಉನ್ನತೀಕರಣಕ್ಕಾಗಿ ಕನಿಷ್ಟ-ರೂ. 20 ಲಕ್ಷದಿಂದ ಗರಿಷ್ಟ ರೂ. 50 ಲಕ್ಷಗಳವರೆಗಿನ ಸಹಾಯಧನವನ್ನು ಕೃಷಿ ವಲಯದ ನವೋದ್ಯಮಿಗಳಿಗೆ ಪೂರ್ವನಿರ್ಧಾರಿತ ಮೈಲಿಗಲ್ಲುಗಳ ಸಾಧನೆಯ ನಂತರ ಕಂತುಗಳಲ್ಲಿ ನೀಡಲಾಗುವುದು.
    - Mentoring and Growth Programme (MGP): ಆಯ್ಕೆಯಾದ ನವೋದ್ಯಮಿಗಳ ಸಾಮರ್ಥ್ಯಾಭಿವೃದ್ಧಿಗೆ ಕೃಷಿ ವಿಶ್ವವಿದ್ಯಾಲಯ, C- CAMP, ವಿದ್ಯುನ್ಮಾನ ಮಾಹಿತಿ ತಂತ್ರಜ್ಞಾನ ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯಡಿ ಸ್ಥಾಪಿತವಾಗಿರುವ Technology Business Incubator (TBI) ಗಳ ಮೂಲಕ ತರಬೇತಿಗಳನ್ನು ನೀಡಲಾಗುವುದು. ಸದರಿ ಕಾರ್ಯಕ್ರಮಕ್ಕಾಗಿ ಪ್ರತ್ಯೇಕವಾಗಿ ರೂ. 20.00 ಲಕ್ಷಗಳ ಅನುದಾನವನ್ನು ನಿಗದಿಪಡಿಸಲಾಗಿದೆ.

14. **ರಾಷ್ಟ್ರೀಯ ಆಹಾರ ಸುರಕ್ಷತಾ ಅಭಿಯಾನ:** ಈ ಯೋಜನೆಯಡಿ ಬತ್ತ, ದ್ವಿದಳಧಾನ್ಯ, ನ್ಯೂಟ್ರಿ ಸಿರಿಧಾನ್ಯ, ಕಬ್ಬು ಮತ್ತು ಹತ್ತಿ ಬೆಳೆಗಳ ಉತ್ಪಾದನೆಯನ್ನು ಹೆಚ್ಚಿಸಲು ಆಧುನಿಕ ತಾಂತ್ರಿಕತೆಗಳ ಗುಚ್ಛ ಪ್ರಾತ್ಯಕ್ಷಿಕೆಗಳನ್ನು ಆಯೋಜಿಸುವುದರ ಜೊತೆಗೆ ಭತ್ತ, ದ್ವಿದಳಧಾನ್ಯ, ನ್ಯೂಟ್ರಿ ಸಿರಿಧಾನ್ಯ ಉತ್ಪಾದನೆಗೆ ಬಿತ್ತನೆ ಬೀಜ, ಲಘು ಪೋಷಕಾಂಶಗಳು, ಜೈವಿಕ ಗೊಬ್ಬರಗಳು, ಸಸ್ಯ ಸಂರಕ್ಷಣಾ ರಾಸಾಯನಿಕಗಳು, ಜಿಪ್ಸಂ/ ಕೃಷಿ ಸುಣ್ಣ ಹಾಗೂ ಕೃಷಿ

ಉಪಕರಣಗಳನ್ನು ಶೇ.50ರ ಸಹಾಯಧನವನ್ನು ನೀಡಲಾಗುತ್ತದೆ. ಇದಲ್ಲದೆ, ದೃಢೀಕೃತ ಬಿತ್ತನೆ ಬೀಜದ ಉತ್ಪಾದನೆಯನ್ನು ಪ್ರೋತ್ಸಾಹಿಸಲು ದ್ವಿದಳಧಾನ್ಯ ಬೆಳೆಗಳಲ್ಲಿ ಪ್ರತಿ ಕ್ವಿಂಟಾಲಿಗೆ ರೂ.5000/- ಮತ್ತು ಸಿರಿಧಾನ್ಯಗಳಿಗೆ ರೂ.3000/- ಪ್ರೋತ್ಸಾಹ ಧನ ನೀಡಲಾಗುತ್ತಿದೆ.

15. **ಮುಖ್ಯಮಂತ್ರಿಯವರ ಸೂಕ್ಷ್ಮ ನೀರಾವರಿ ಯೋಜನೆ:** ಕೇಂದ್ರ ಪುರಸ್ಕೃತ ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆಯಡಿ ಅನುಷ್ಠಾನ ಮಾಡಲಾಗುತ್ತಿದೆ. ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆ ಅನುಷ್ಠಾನಕ್ಕೆ ತೋಟಗಾರಿಕೆ ಇಲಾಖೆಯು ನೋಡಲ್ ಇಲಾಖೆಯಾಗಿರುತ್ತದೆ. ಕೇಂದ್ರ ಸರ್ಕಾರದ ಮಾರ್ಗಸೂಚಿ ಅನ್ವಯ ಸಣ್ಣ / ಅತಿ ಸಣ್ಣ ರೈತರಿಗೆ ಶೇ.55 ಮತ್ತು ಇತರೇ ವರ್ಗದ ರೈತರಿಗೆ ಶೇ.45 ರಷ್ಟು ಸಹಾಯಧನವನ್ನು ಪ್ರತಿಯೊಬ್ಬ ರೈತರಿಗೆ ಗರಿಷ್ಠ 5.0 ಹೆಕ್ಟೇರ್ ಪ್ರದೇಶದವರೆಗೆ ನೀಡಲು ಅವಕಾಶವಿರುತ್ತದೆ. ಇದರಲ್ಲಿ, ಕೇಂದ್ರ ಮತ್ತು ರಾಜ್ಯ ಸರ್ಕಾರದ ಪಾಲು 60:40 ಇದ್ದು, ರಾಜ್ಯದಲ್ಲಿ ರಾಜ್ಯ ಸರ್ಕಾರದ ವತಿಯಿಂದ ರಾಜ್ಯದ ಪಾಲಿನ ಹೆಚ್ಚುವರಿ ಸಹಾಯಧನವನ್ನು ಸೇರಿಸಿ 2 ಹೆಕ್ಟೇರ್ ಪ್ರದೇಶದವರೆಗೆ ಎಲ್ಲಾ ವರ್ಗದ ರೈತರಿಗೆ ಸೂಕ್ಷ್ಮ ನೀರಾವರಿ ಘಟಕಗಳ ಅಳವಡಿಕೆಗೆ ಶೇ. 90ರ ಸಹಾಯಧನವನ್ನು ನೀಡಲಾಗುತ್ತದೆ.

16. **ಕೃಷಿ ವಿಸ್ತರಣೆ ಉಪ ಅಭಿಯಾನ:** ವಿಸ್ತರಣಾ ಸುಧಾರಣೆಗಳಿಗಾಗಿ ರಾಜ್ಯ ವಿಸ್ತರಣಾ ಕಾರ್ಯಕ್ರಮಗಳಿಗೆ ಬೆಂಬಲ ಯೋಜನೆಯು ವಿಸ್ತರಣಾ ಪದ್ಧತಿಯನ್ನು ರೈತರೇ ಮುನ್ನಡೆಸುವ ಹಾಗೂ ರೈತರಿಗೆ ಉತ್ತರದಾಯಿತ್ವವಾಗಬೇಕಾದ ಯೋಜನೆಯಾಗುವ ಗುರಿಯನ್ನು ಹೊಂದಿದೆ. ಭಾಗವಹಿಸುವಿಕೆ ಆಧಾರದ ಮೇಲೆ ವಿಸ್ತರಣಾ ಸುಧಾರಣೆಗಳನ್ನು ಜಾರಿಗೆ ತರಲು ಮತ್ತು ರೈತರಿಗೆ ತಂತ್ರಜ್ಞಾನವನ್ನು ಹೊಸ ಸಾಂಸ್ಥಿಕ ವ್ಯವಸ್ಥೆ ಮೂಲಕ ಪ್ರಸರಿಸುವ ಉದ್ದೇಶದಿಂದ ಜಿಲ್ಲಾ ಮಟ್ಟದಲ್ಲಿ ಕೃಷಿ ತಂತ್ರಜ್ಞಾನ ನಿರ್ವಹಣಾ ಸಂಸ್ಥೆ(ATMA)ಯನ್ನು ಅಸ್ತಿತ್ವಕ್ಕೆ ತರಲಾಗಿದೆ. ಈ ಯೋಜನೆಯಡಿಯಲ್ಲಿ ಭಾರತ ಸರ್ಕಾರ ನಿಗದಿಪಡಿಸಿರುವ ಮಾರ್ಗಸೂಚಿಯಂತೆ ಅಧಿಕಾರಿ/ ರೈತರ ತರಬೇತಿ, ಪರಿಚಯ ಪ್ರವಾಸ, ಪ್ರಾತ್ಯಕ್ಷಿಕೆ, ರೈತರ ಗುಂಪು ರಚನೆ, ಕೃಷಿ ಪಾಠಶಾಲೆ, ಕೃಷಿ ಮೇಳ, ಕ್ಷೇತ್ರೋತ್ಸವ ಇತ್ಯಾದಿ ಕಾರ್ಯಕ್ರಮಗಳನ್ನು ಅನುಷ್ಠಾನ ಮಾಡಲಾಗುತ್ತದೆ. ಯೋಜನೆಯಡಿ ಆಯೋಜಿಸುವ ವಿಸ್ತರಣಾ ಕಾರ್ಯಕ್ರಮಗಳಲ್ಲಿ ಎಲ್ಲಾ ವರ್ಗದ ರೈತರು / ರೈತ ಮಹಿಳೆಯರ ಪಾಲ್ಗೊಳ್ಳುವಿಕೆ ಅವಕಾಶವಿರುತ್ತದೆ.

17. **ಕೃಷಿ ಯಾಂತ್ರೀಕರಣ ಉಪ ಅಭಿಯಾನ (SMAM):** ರಾಜ್ಯದಲ್ಲಿ ರೈತರು ಸಕಾಲದಲ್ಲಿ ಕೃಷಿ ಚಟುವಟಿಕೆಗಳನ್ನು ಕೈಗೊಳ್ಳಲು, ಕೃಷಿ ಕಾರ್ಮಿಕರ ಸಮಸ್ಯೆಯನ್ನು ನೀಗಿಸಲು, ಹೆಚ್ಚಿನ ಇಳುವರಿ ಪಡೆಯಲು ನೆರವಾಗುವಂತೆ ಸಹಕಾರಿಯಾಗಲು ಹಾಗೂ ಕ್ಷೇತ್ರ ಶಕ್ತಿಯನ್ನು (ಪ್ರಸ್ತುತವಿರುವ 2.115 KW/ Ha to 2.5kW/Ha by 2023 and 4.00kW/ha by 2030) ಹೆಚ್ಚಿಸಲು ಕೃಷಿ ಯಾಂತ್ರೀಕರಣ ಯೋಜನೆಯನ್ನು ಅನುಷ್ಠಾನ ಮಾಡಲಾಗುತ್ತಿದೆ. ರೈತರಿಗೆ ಸಣ್ಣ ಟ್ರ್ಯಾಕ್ಟರ್, ಪವರ್ ಟಿಲ್ಲರ್ಗಳ ಜೊತೆಗೆ ಭೂಮಿ ಸಿದ್ಧತೆ ಉಪಕರಣಗಳು, ಬಿತ್ತನೆ/ನಾಟಿ ಮಾಡುವ ಉಪಕರಣಗಳು, ಶಕ್ತಿ ಚಾಲಿತ ಸಸ್ಯ ಸಂರಕ್ಷಣಾ ಉಪಕರಣಗಳು, ಶಕ್ತಿ ಚಾಲಿತ ಅಂತರ ಬೇಸಾಯ ಉಪಕರಣಗಳು, ಕೊಯ್ಲು ಮತ್ತು ಸಂಸ್ಕರಣಾ ಉಪಕರಣಗಳು, ತ್ಯಾಜ್ಯ ವಸ್ತುಗಳ ನಿರ್ವಹಣಾ ಉಪಕರಣಗಳು, ಅಂತರ ಬೇಸಾಯ ಉಪಕರಣಗಳು, ಡೀಸೆಲ್ ಪಂಪ್‌ಸೆಟ್ ಗಳು ಇತ್ಯಾದಿ ಕೃಷಿ ಯಂತ್ರೋಪಕರಣಗಳಿಗೆ ಸಹಾಯಧನ ಒದಗಿಸಲಾಗುತ್ತಿದೆ. ಹೀಗೆ ಉಳುಮೆಯಿಂದ ಕೊಯ್ಲಿನವರೆಗೆ ಹಾಗು ಕೊಯ್ಲು ನಂತರ ಉಪಯುಕ್ತವಾಗುವ ವಿವಿಧ ನಮೂನೆಯ ಕೃಷಿ ಉಪಕರಣಗಳನ್ನು ಈ ಕೆಳಕಂಡಂತೆ ಸಹಾಯಧನದಡಿ ರೈತರಿಗೆ ಒದಗಿಸಲಾಗುತ್ತಿದೆ.

- ಕೃಷಿ ಯಂತ್ರೋಪಕರಣಗಳಿಗೆ ಸಂಬಂಧಿಸಿದಂತೆ ಪ್ರತಿ ರೈತ ಫಲಾನುಭವಿಗಳಿಗೆ (Individual farmers) (ಟ್ರಾಕ್ಟರ್ ಹೊರತುಪಡಿಸಿ) ಸಾಮಾನ್ಯ ರೈತರಿಗೆ ಶೇ.50 ರಷ್ಟು

  ಸಹಾಯಧನ ಮತ್ತು ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದ ರೈತರಿಗೆ ಶೇ.90 ರಷ್ಟು ಸಹಾಯಧನವನ್ನು ಗರಿಷ್ಟ ಮಿತಿ ರೂ.1.00 ಲಕ್ಷದವರೆಗೆ ನೀಡಲಾಗುತ್ತಿದೆ.
- ರೈತರು ಒಂದಕ್ಕಿಂತ ಹೆಚ್ಚು ವಿವಿಧ ಉಪಕರಣಗಳಿಗೆ (ಪುನರಾವರ್ತನೆಯಾಗದಂತೆ) ಗರಿಷ್ಠ ರೂ.1.00 ಲಕ್ಷದವರೆಗೆ ಸಹಾಯಧನವನ್ನು ಪಡೆಯಬಹುದಾಗಿರುತ್ತದೆ.
- 45 ಪಿ.ಟಿ.ಒ ಹೆಚ್.ಪಿ ವರೆಗಿನ ಟ್ರಾಕ್ಟರ್ ಗಳಿಗೆ ಸಾಮಾನ್ಯ ವರ್ಗದ ರೈತರಿಗೆ ರೂ.0.75 ಲಕ್ಷ ಮತ್ತು ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದ ರೈತರಿಗೆ ಶೇ.90 ರಷ್ಟು ಗರಿಷ್ಠ ರೂ.3.00 ಲಕ್ಷ ಸಹಾಯಧನ ನೀಡಲಾಗುತ್ತಿದೆ.

18. **ರಾಷ್ಟ್ರೀಯ ಕೃಷಿ ವಿಕಾಸ ಯೋಜನೆಯಡಿ ಸಮಗ್ರ ಕೃಷಿ ಪದ್ಧತಿಯ ವಿಸ್ತರಣೆ ಹಾಗೂ ಜನಪ್ರಿಯಗೊಳಿಸುವ ಕಾರ್ಯಕ್ರಮ:** ಕೃಷಿ ಮತ್ತು ಕೃಷಿ ಸಂಬಂಧಿತ ಚಟುವಟಿಕೆಗಳಾದ ತೋಟಗಾರಿಕೆ ಹಾಗೂ ಪಶುಸಂಗೋಪನೆಗಳನ್ನು ಒಗ್ಗೂಡಿಸಿ "ಸಮಗ್ರ ಕೃಷಿ ಪದ್ಧತಿ "ಮೂಲಕ ರೈತನ ಆದಾಯ ಹೆಚ್ಚಳ ಮಾಡುವುದು ಹಾಗೂ ಅಳವಡಿಸಿದ ಪ್ರದೇಶದಲ್ಲಿ/ ಜಮೀನಿನಲ್ಲಿ ಬೆಳೆ ಉತ್ಪಾದಕತೆ, ಸುಸ್ಥಿರತೆ, ಸಮತೋಲನಾ ಆಹಾರ ಉತ್ಪಾದನೆ, ತಾಜ್ಯಗಳ ಮರುಬಳಕೆ ಹಾಗೂ ವರ್ಷಪೂರ್ತಿ ಆದಾಯ ಹೆಚ್ಚಿಸುವ ಉದ್ದೇಶದಿಂದ ಸಮಗ್ರ ಕೃಷಿ ಪದ್ಧತಿ ಮಾದರಿಗಳ ಅನುಷ್ಠಾನಕ್ಕೆ ಸಹಾಯಧನ ನೀಡಲಾಗುತ್ತಿದೆ. ಪ್ರಸಕ್ತ ಸಾಲಿನಲ್ಲಿ ಎಲ್ಲಾ ಜಿಲ್ಲೆಗಳಲ್ಲಿ ಒಟ್ಟಾರೆಯಾಗಿ 4000 ಸಮಗ್ರ ಕೃಷಿ ಪದ್ಧತಿ ಮಾದರಿಗಳನ್ನು ಅನುಷ್ಠಾನಗೊಳಿಸಲು ಕಾರ್ಯಕ್ರಮವನ್ನು ರೂಪಿಸಿದ್ದು ಅದರಂತೆ ಅನುಷ್ಠಾನ ಮಾಡಲಾಗುತ್ತಿದೆ.

19. **ರಾಷ್ಟ್ರೀಯ ಖಾದ್ಯ ತೈಲ ಅಭಿಯಾನ-ಎಣ್ಣೆಕಾಳು (NMEO-Oilseeds):** ಈ ಯೋಜನೆಯಡಿ ಎಣ್ಣೆ ಕಾಳುಗಳ ಉತ್ಪಾದನೆಯನ್ನು ಹೆಚ್ಚಿಸಲು ನೂತನ/ಸುಧಾರಿತ ತಾಂತ್ರಿಕತೆಗಳ ದೊಡ್ಡ ಪ್ರಮಾಣದ ಪ್ರಾತ್ಯಕ್ಷಿಕೆಗಳನ್ನು ಆಯೋಜಿಸುವುದರ ಜೊತೆಗೆ ಬಿತ್ತನೆ ಬೀಜ, ಲಘು ಪೋಷಕಾಂಶಗಳು, ಜೈವಿಕ ಗೊಬ್ಬರಗಳು, ಪೀಡೆನಾಶಕಗಳು, ಸಸ್ಯ ಸಂರಕ್ಷಣಾ ರಾಸಾಯನಿಕಗಳು, ಜಿಪ್ಸಂ, ಕೃಷಿ ಉಪಕರಣಗಳು ಹಾಗೂ ನೀರು ಒದಗಿಸುವ ಪೈಪುಗಳನ್ನು ಶೇ.50ರ ಸಹಾಯದನವನ್ನು ನೀಡಲಾಗುತ್ತದೆ. ಇದಲ್ಲದೇ, ದೃಢೀಕೃತ ಬಿತ್ತನೆ ಬೀಜದ ಉತ್ಪಾದನೆಯನ್ನು ಪ್ರೋತ್ಸಾಹಿಸಲು ಪ್ರತಿ ಕ್ವಿಂಟಾಲ್ ಬಿತ್ತನೆ ಬೀಜೋತ್ಪಾದನೆಗೆ ರೂ.2500/-ಗಳ ಪ್ರೋತ್ಸಾಹ ನೀಡಲಾಗುತ್ತಿದೆ.

20. **ಪ್ರಧಾನ ಮಂತ್ರಿ ಕಿರು ಆಹಾರ ಸಂಸ್ಕರಣಾ ಉದ್ದಿಮೆಗಳ ನಿಯಮಬದ್ಧಗೊಳಿಸುವಿಕೆ ಯೋಜನೆ:** ವ್ಯಕ್ತಿಗತ ಕಿರು ಉದ್ದಿಮೆಗಳಿಗೆ ಬೆಂಬಲ, ರೈತ ಉತ್ಪಾದಕರ ಸಂಸ್ಥೆಗಳು/ ಉತ್ಪಾದಕ ಸೊಸೈಟಿಗಳಿಗೆ ಸಹಾಯಧನ, ಸ್ವಸಹಾಯ ಸಂಘಗಳ ಸದಸ್ಯರಿಗೆ ಕಾರ್ಯ ನಿರ್ವಹಣಾ ಬಂಡವಾಳ ಹಾಗೂ ಪರಿಕರಗಳ ಖರೀದಿಗೆ ಪ್ರಾಥಮಿಕ ಬಂಡವಾಳ, ಸಾಮಾನ್ಯ ಮೂಲಭೂತ ಸೌಕರ್ಯಕ್ಕೆ ಬೆಂಬಲ, ಬ್ರ್ಯಾಂಡಿಂಗ್ ಹಾಗೂ ಮಾರುಕಟ್ಟೆಗೆ ಬೆಂಬಲ, ರಾಜ್ಯದ ತಾಂತ್ರಿಕ ಸಂಸ್ಥೆಗಳಲ್ಲಿ ಆಹಾರ ಸಂಸ್ಕರಣಾ ಉದ್ಯಮಿಗಳಿಗೆ ತರಬೇತಿ ನೀಡಲು ಹಾಗೂ ಪ್ರಾಯೋಗಿಕ ಉತ್ಪಾದನೆ ಕೈಗೊಳ್ಳಲು ಇನ್ ಕ್ಯುಬೇಷನ್ ಕೇಂದ್ರಗಳ ಸ್ಥಾಪನೆಗೆ ಅನುದಾನವನ್ನು ನೀಡಲಾಗುವುದು. KAPPEC ಸಂಸ್ಥೆಯು ಈ ಯೋಜನೆಯ ಅನುಷ್ಠಾನಕ್ಕೆ ನೋಡಲ್ ಇಲಾಖೆಯಾಗಿರುತ್ತದೆ.

    ಅಸಂಘಟಿತ ವಲಯದಲ್ಲಿರುವ ಸೂಕ್ಷ್ಮ/ ಕಿರು ಆಹಾರ ಸಂಸ್ಕರಣ ಉದ್ದಿಮೆಗಳನ್ನು ಪ್ರೋತ್ಸಾಹಿಸಿ ಅವುಗಳ ಸ್ಪರ್ಧಾತ್ಮಕತೆಯನ್ನು ಹೆಚ್ಚಿಸುವುದು ಮತ್ತು ಅವುಗಳನ್ನು ಸಂಘಟಿತ ವಲಯಕ್ಕೆ ತರುವುದು ಹಾಗೂ ರೈತ ಉತ್ಪಾದಕ ಸಂಸ್ಥೆಗಳು, ಸ್ವಸಹಾಯ ಸಂಘಗಳು ಹಾಗೂ

ಉತ್ಪಾದಕ ಸಹಕಾರಿ ಸಂಘಗಳಿಗೆ ಅವುಗಳ ಸರಪಳಿಕೊಂಡಿಯೊಂದಿಗೆ ಉತ್ತೇಜನ ನೀಡಲು ಕೇಂದ್ರ ಸರ್ಕಾರದ ಮಾರ್ಗಸೂಚಿಯನ್ವಯ ಅನುದಾನವನ್ನು ನೀಡಲಾಗುತ್ತಿದೆ.

21. **ಮಣ್ಣು ಆರೋಗ್ಯ ಮತ್ತು ಫಲವತ್ತೆ ಯೋಜನೆ (ಆರ್.ಕೆ.ವಿ.ವೈ):** ಮಣ್ಣು ಮಾದರಿ ಸಂಗ್ರಹಣೆ, ವಿಶ್ಲೇಷಣೆ ಮತ್ತು ಮಣ್ಣು ಆರೋಗ್ಯ ಚೀಟಿ ವಿತರಣೆ, ಪ್ರಾತ್ಯಕ್ಷಿಕೆ,ತರಬೇತಿ ಮತ್ತು ಅರಿವು ಮೂಡಿಸುವ ಕಾರ್ಯಕ್ರಮ ( ರೂ 0.05ಲಕ್ಷಗಳು ಪ್ರತಿ ಘಟಕ), ಸಮಸ್ಯಾತ್ಮಕ ಮಣ್ಣುಗಳ ನಿರ್ವಹಣೆ: ಕೃಷಿ ಸುಣ್ಣ/ಜಿಪ್ಸಂ, ಹಸಿರೆಲೆ ಗೊಬ್ಬರ, ಬದುಗಳ ನಿರ್ಮಾಣ ಪ್ರತಿ ಹೆಕ್ಟೇರ್ ಗೆ ನಿಗದಿಪಡಿಸಿದ ದರವನ್ನು ಪರಿಕರಗಳ ರೂಪದಲ್ಲಿ ನೀಡಲಾಗುತ್ತದೆ, ಹೊಸ ಮಣ್ಣು ಪರೀಕ್ಷಾ ಪ್ರಯೋಗಾಲಯಗಳ ಸ್ಥಾಪನೆ, ಮಣ್ಣು ಪರೀಕ್ಷಾ ಪ್ರಯೋಗಾಲಯಗಳ ಬಲವರ್ಧನೆ , ರಸಗೊಬ್ಬರ ನಿಯಂತ್ರಣ ಪ್ರಯೋಗಾಲಯಗಳ ಬಲವರ್ಧನೆ ಕಾರ್ಯಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ.

ಉಪ ಕೃಷಿ ನಿರ್ದೇಶಕರು
(ಯೋಜನೆ)

## ಅನುಬಂಧ 2-LCQ 563

### ಪ್ರಸ್ತುತ ಹಣಕಾಸು ವರ್ಷದಲ್ಲಿ ರೈತರ ಕಲ್ಯಾಣಕ್ಕಾಗಿ ಮೀಸಲಿಟ್ಟ ಅನುದಾನ, ಮಂಜೂರು ಮಾಡಿದ ಅನುದಾನ ಹಾಗೂ ಇಲ್ಲಿಯವರೆಗೆ ಬಳಕೆಯಾದ ಅನುದಾನದ ವಿವರ (ರೂ.ಲಕ್ಷಗಳಲ್ಲಿ)

| ಕ್ರ. ಸಂ | ಕಾರ್ಯಕ್ರಮ | ಮೀಸಲಿಟ್ಟ ಅನುದಾನ | ಮಂಜೂರು ಮಾಡಿದ ಅನುದಾನ/ ಬಿಡುಗಡೆ | ಬಳಕೆಯಾದ ಅನುದಾನ | ಬಳಕೆಯಾಗದಿರುವ ಅನುದಾನಕ್ಕೆ ತೆಗೆದುಕೊಂಡಿರುವ ಕ್ರಮ |
|---|---|---|---|---|---|
| 1 | ಬೀಜಗಳ ಪೂರೈಕೆ | 16000.00 | 10775.76 | 9724.59 | |
| 2 | ಸಸ್ಯ ಸಂರಕ್ಷಣೆ | 500.00 | 333.33 | 248.29 | |
| 3 | ಕೃಷಿ ಯಾಂತ್ರೀಕರಣ | 12000.00 | 7927.84 | 3605.12 | |
| 4 | ಕೃಷಿ ಸಂಸ್ಕರಣೆ | 3500.00 | 2296.40 | 853.13 | |
| 5 | ರೈತ ಸಿರಿ & ಸಾವಯವ ಕೃಷಿ | 700.00 | 408.67 | 88.20 | |
| 6 | ಸಾವಯವ ಇಂಗಾಲ ಅಭಿಯಾನ | 300.00 | 258.00 | 254.08 | |
| 7 | ಹೊಸ ಬೆಳೆ ವಿಮಾ ಯೋಜನೆ | 60000.00 | 39999.00 | 39999.00 | |
| 8 | ಬೆಳೆ ಸಮೀಕ್ಷೆ | 7800.00 | 5200.00 | 3462.41 | |
| 9 | ಮುಖ್ಯಮಂತ್ರಿ ರೈತ ವಿದ್ಯಾನಿಧಿ | 27000.00 | 15480.00 | 0.00 | ಸದರಿ ಯೋಜನೆಯನ್ನು ಅನುಷ್ಠಾನಗೊಳಿಸುವ ಪ್ರಕ್ರಿಯೆ ಚಾಲನೆಯಲ್ಲಿರುತ್ತದೆ. |
| 10 | ಕೃಷಿ ಭಾಗ್ಯ | ಅನುದಾನ ನಿರೀಕ್ಷೆಯಲ್ಲಿರುತ್ತದೆ | 0.00 | 0.00 | |
| 11 | ಹೈಟೆಕ್ ಹಾರ್ವೆಸ್ಟರ್ ಹಬ್ | 5000.00 | 0.00 | 0.00 | |
| 12 | ಕೃಷಿ ನವೋದ್ಯಮ | 1000.00 | 0.00 | 0.00 | |
| 13 | ರಾಷ್ಟ್ರೀಯ ಆಹಾರ ಸುರಕ್ಷತಾ ಅಭಿಯಾನ | 16666.00 | 14610.77 | 8822.00 | |
| 14 | ಮುಖ್ಯಮಂತ್ರಿಗಳ ಸೂಕ್ಷ್ಮ ನೀರಾವರಿ ಯೋಜನೆ | 12000.00 | 0.00 | 0.00 | |
| 15 | ಕೃಷಿ ವಿಸ್ತರಣೆ ಉಪ ಅಭಿಯಾನ | 3454.57 | 848.75 | 836.37 | |
| 16 | ಕೃಷಿ ಯಾಂತ್ರೀಕರಣ ಉಪ ಅಭಿಯಾನ (SMAM) | 25000.00 | 12923.32 | 12198.55 | |
| 17 | ರಾಷ್ಟ್ರೀಯ ಕೃಷಿ ವಿಕಾಸ ಯೋಜನೆ (RKVY) | 27097.00 | 10210.00 | 8134.00 | |
| 18 | ರಾಷ್ಟ್ರೀಯ ಖಾದ್ಯತೈಲ ಅಭಿಯಾನ-ಎಣ್ಣೆಕಾಳು (NMEO-oilseeds) | 1600.00 | 0.00 | 0.00 | |
| 19 | ಪ್ರಧಾನ ಮಂತ್ರಿ ಕಿರು ಆಹಾರ ಸಂಸ್ಕರಣಾ ಉದ್ದಿಮೆಗಳ ನಿಯಮಬದ್ಧಗೊಳಿಸುವಿಕೆ ಯೋಜನೆ(PMFME) | 2910.00 | 1347.31 | 1171.31 | |
| 20 | ಮಣ್ಣಿನ ಫಲವತ್ತತೆಯ ಯೋಜನೆ | 8.00 | 0.00 | 0.00 | |

ಉಪ ಕೃಷಿ ನಿರ್ದೇಶಕರು
(ಯೋಜನೆ)

# ಅನುಬಂಧ-2 (ಅ)

## ಪ್ರಸ್ತುತ ಹಣಕಾಸು ವರ್ಷದಲ್ಲಿ (2023-24) ರೈತರ ಕಲ್ಯಾಣಕ್ಕಾಗಿ ಜಲಾನಯನ ಅಭಿವೃದ್ಧಿ ಇಲಾಖೆಯಡಿ ಮೀಸಲಿಟ್ಟ ಅನುದಾನ, ಮಂಜೂರು ಮಾಡಿದ ಅನುದಾನ ಹಾಗೂ ಬಳಕೆಯಾದ ಅನುದಾನದ ವಿವರ (ನವೆಂಬರ್ 2023ರ ಅಂತ್ಯಕ್ಕೆ)

**LCQ-563** (ರೂ.ಲಕ್ಷಗಳಲ್ಲಿ)

| ಕ್ರ.ಸಂ | ಯೋಜನೆ | ಮೀಸಲಿಟ್ಟ ಅನುದಾನ | ಮಂಜೂರು ಮಾಡಿದ ಅನುದಾನ (ಬಿಡುಗಡೆ) | ಬಳಕೆಯಾದ ಅನುದಾನ (ವೆಚ್ಚ) |
|---|---|---|---|---|
| 1 | ಜಲಾನಯನ ಅಭಿವೃದ್ಧಿ ಘಟಕ-ಪ್ರಧಾನ ಮಂತ್ರಿ ಕೃಷಿ ಸಿಂಚಯಿ ಯೋಜನೆ 2.0 (WDC- PMKSY 2.0) (ಕೇಂದ್ರ ಪುರಸ್ಕೃತ ಯೋಜನೆ) (*) | 16160.00 | 10761.66 | 7443.14 |
| 2 | ಮಳೆ ಆಧಾರಿತ ಪ್ರದೇಶ ಅಭಿವೃದ್ಧಿ (RAD) RKVY-RAFTAAR) (ಕೇಂದ್ರ ಪುರಸ್ಕೃತ ಯೋಜನೆ) (*) | 1500.00 | 815.28 | 985.50 |
| 3 | ವಿಶ್ವ ಬ್ಯಾಂಕ್ ನೆರವಿನ REWARD ಯೋಜನೆ (*) | 10000.00 | 2500.00 | 3496.85 |
| 4 | ನಬಾರ್ಡ್ ಆರ್.ಐ.ಡಿ.ಎಫ್ (ಟ್ರಾಂಚೆ-27) ನೆರವಿನ ಜಲಾನಯನ ಅಭಿವೃದ್ಧಿ ಯೋಜನೆಗಳು | 687.43 | 458.29 | 312.36 |
| 5 | ರೈತ ಉತ್ಪಾದಕರ ಸಂಸ್ಥೆಗಳ ಉತ್ತೇಜನ (FPOs) & ಅಮೃತ ರೈತ ಉತ್ಪಾದಕರ ಸಂಸ್ಥೆಗಳ ಸ್ಥಾಪನೆ ಮತ್ತು ಪ್ರೋತ್ಸಾಹ (AFPO) | 400.00 | 266.67 | 131.21 |
| 6 | ರೈತ ಉತ್ಪನ್ನಗಳಿಗೆ ಏಕೀಕೃತ ಬ್ರ್ಯಾಂಡಿಂಗ್ ಯೋಜನೆ | 200.00 | 0.00 | 0.00 |
| 7 | ರೈತ ಉತ್ಪಾದಕ ಸಂಸ್ಥೆಗಳನ್ನು ಬಲಪಡಿಸಲು ಹಿಂದುಳಿದ ತಾಲ್ಲೂಕುಗಳ 100 ರೈತ ಉತ್ಪಾದಕರ ಸಂಸ್ಥೆಗಳಿಗೆ ಸಹಕಾರಿ ಮತ್ತು ವಾಣಿಜ್ಯ ಬ್ಯಾಂಕುಗಳು ನೀಡುವ ತಲಾ ರೂ. 20.00 ಲಕ್ಷ ಗಳವರೆಗಿನ ಸಾಲಕ್ಕೆ ಶೇ.4ರ ಬಡ್ಡಿ ಸಹಾಯಧನ ನೀಡುವ ಯೋಜನೆ. | 50.00 | 0.00 | 0.00 |
| 8 | 10,000 ರೈತ ಉತ್ಪಾದಕರ ಸಂಸ್ಥೆಗಳ ರಚನೆ ಮತ್ತು ಉತ್ತೇಜನ (ಕೇಂದ್ರ ವಲಯ) | 1392.65 | 380.65 | 42.65 |

(*) ವೆಚ್ಚದಲ್ಲಿ ಪ್ರಾರಂಭಿಕ ಶಿಲ್ಕು ಸೇರಿರುತ್ತದೆ.

ಷರಾ: ಮಂಜೂರಾದ ಅನುದಾನವನ್ನು ಪ್ರಸ್ತುತ ಸಾಲಿನಲ್ಲಿಯೇ ಬಳಕೆ ಮಾಡಿಕೊಳ್ಳಲಾಗುವುದು.

# ಅನುಬಂಧ-1

(LCQ 563)

**2022-23 ಮತ್ತು 2023-24 ನೇ ಸಾಲಿನಲ್ಲಿ ಜಲಾನಯನ ಅಭಿವೃದ್ಧಿ ಇಲಾಖೆಯಲ್ಲಿ ರಾಜ್ಯದ ರೈತರ ಕಲ್ಯಾಣಕ್ಕಾಗಿ ರೂಪಿಸಿರುವ/ಅನುಷ್ಠಾನಗೊಳಿಸಿರುವ ಯೋಜನೆಗಳ ವಿವರ**

(ಅ) 2022-23 ನೇ ಸಾಲಿನಲ್ಲಿ ಅನುಷ್ಠಾನದಲ್ಲಿದ್ದ ಯೋಜನೆಗಳು

1. ಜಲಾನಯನ ಅಭಿವೃದ್ಧಿ ಘಟಕ-ಪ್ರಧಾನ ಮಂತ್ರಿ ಕೃಷಿ ಸಿಂಚಯಿ ಯೋಜನೆ 2.0 (WDC- PMKSY 2.0)
2. ಮಳೆ ಆಧಾರಿತ ಪ್ರದೇಶ ಅಭಿವೃದ್ಧಿ (RAD) RKVY-RAFTAAR
3. ಜಲಾನಯನ ಅಭಿವೃದ್ಧಿ ಮೂಲಕ ಬರಗಾಲ ತಡೆಯುವಿಕೆ (WDPD)
4. ವಿಶ್ವ ಬ್ಯಾಂಕ್ ನೆರವಿನ REWARD ಯೋಜನೆ
5. ನಬಾರ್ಡ್ ಆರ್.ಐ.ಡಿ.ಎಫ್ (ಟ್ರಾಂಚೆ-27) ನೆರವಿನ ಜಲಾನಯನ ಅಭಿವೃದ್ಧಿ ಯೋಜನೆಗಳು
6. ರೈತ ಉತ್ಪಾದಕರ ಸಂಸ್ಥೆಗಳ ಉತ್ತೇಜನ (FPOs)
7. ಅಮೃತ ರೈತ ಉತ್ಪಾದಕರ ಸಂಸ್ಥೆಗಳ ಸ್ಥಾಪನೆ ಮತ್ತು ಪ್ರೋತ್ಸಾಹ (AFPO)
8. 10,000 ರೈತ ಉತ್ಪಾದಕರ ಸಂಸ್ಥೆಗಳ ರಚನೆ ಮತ್ತು ಉತ್ತೇಜನ (ಕೇಂದ್ರ ವಲಯ) ಯೋಜನೆಯಡಿ ರೈತ ಉತ್ಪಾದಕರ ಸಂಸ್ಥೆಗಳ ರಚನೆ

ಇತರೆ ಇಲಾಖೆಯ ಅನುದಾನದಿಂದ ಅನುಷ್ಠಾನಗೊಂಡ ಯೋಜನೆಗಳು:

9. ಪ್ರಧಾನ ಮಂತ್ರಿ ಕೃಷಿ ಸಿಂಚಯಿ ಯೋಜನೆ -ಇತರ ಉಪಚಾರಗಳು(PMKSY -OI)
10. ಅಟಲ್ ಭೂಜಲ್ ಯೋಜನೆ
11. ರಾಷ್ಟ್ರೀಯ ಕೃಷಿ ವಿಕಾಸ ಯೋಜನೆ-ತಡೆಅಣೆ ನಿರ್ಮಾಣ (RKVY-CD)
12. ರಾಷ್ಟ್ರೀಯ ಕೃಷಿ ವಿಕಾಸ ಯೋಜನೆ- ರೈತ ಉತ್ಪಾದಕ ಸಂಸ್ಥೆಗಳ ರಚನೆ(RKVY-FPO)
13. ರಾಷ್ಟ್ರೀಯ ಕೃಷಿ ವಿಕಾಸ ಯೋಜನೆ- ಸಾರ್ವಜನಿಕ ಖಾಸಗಿ ಸಹಭಾಗಿತ್ವದಲ್ಲಿ ಸಮಗ್ರ ಕೃಷಿ ಅಭಿವೃದ್ಧಿ (RKVY-PPP-IAD)

(ಆ) 2023-24 ನೇ ಸಾಲಿನಲ್ಲಿ ಅನುಷ್ಠಾನದಲ್ಲಿರುವ ಯೋಜನೆಗಳು

1. ಜಲಾನಯನ ಅಭಿವೃದ್ಧಿ ಘಟಕ-ಪ್ರಧಾನ ಮಂತ್ರಿ ಕೃಷಿ ಸಿಂಚಯಿ ಯೋಜನೆ 2.0 (WDC- PMKSY 2.0)
2. ಮಳೆ ಆಧಾರಿತ ಪ್ರದೇಶ ಅಭಿವೃದ್ಧಿ (RAD) RKVY-RAFTAAR
3. ವಿಶ್ವ ಬ್ಯಾಂಕ್ ನೆರವಿನ REWARD ಯೋಜನೆ
4. ನಬಾರ್ಡ್ ಆರ್.ಐ.ಡಿ.ಎಫ್ (ಟ್ರಾಂಚೆ-27) ನೆರವಿನ ಜಲಾನಯನ ಅಭಿವೃದ್ಧಿ ಯೋಜನೆಗಳು
5. ರೈತ ಉತ್ಪಾದಕರ ಸಂಸ್ಥೆಗಳ ಉತ್ತೇಜನ (FPOs)
6. ಅಮೃತ ರೈತ ಉತ್ಪಾದಕರ ಸಂಸ್ಥೆಗಳ ಸ್ಥಾಪನೆ ಮತ್ತು ಪ್ರೋತ್ಸಾಹ (AFPO)
7. 10,000 ರೈತ ಉತ್ಪಾದಕರ ಸಂಸ್ಥೆಗಳ ರಚನೆ ಮತ್ತು ಉತ್ತೇಜನ (ಕೇಂದ್ರ ವಲಯ) ಯೋಜನೆಯಡಿ ರೈತ ಉತ್ಪಾದಕರ ಸಂಸ್ಥೆಗಳ ರಚನೆ
8. ರೈತ ಉತ್ಪನ್ನಗಳಿಗೆ ಏಕೀಕೃತ ಬ್ರ್ಯಾಂಡಿಂಗ್ ಯೋಜನೆ
9. ರೈತ ಉತ್ಪಾದಕ ಸಂಸ್ಥೆಗಳನ್ನು ಬಲಪಡಿಸಲು ಹಿಂದುಳಿದ ತಾಲ್ಲೂಕುಗಳ 100 ರೈತ ಉತ್ಪಾದಕರ ಸಂಸ್ಥೆಗಳಿಗೆ ಸಹಕಾರಿ ಮತ್ತು ವಾಣಿಜ್ಯ ಬ್ಯಾಂಕುಗಳು ನೀಡುವ ತಲಾ ರೂ. 20.00 ಲಕ್ಷಗಳವರೆಗಿನ ಸಾಲಕ್ಕೆ ಶೇ.4ರ ಬಡ್ಡಿ ಸಹಾಯಧನ ನೀಡುವ ಯೋಜನೆ.

ಇತರ ಇಲಾಖೆಯ ಅನುದಾನದಿಂದ ಅನುಷ್ಠಾನಗೊಳಿಸಲಾಗುತ್ತಿರುವ ಯೋಜನೆಗಳು:

10. ಪ್ರಧಾನ ಮಂತ್ರಿ ಕೃಷಿ ಸಿಂಚಯಿ ಯೋಜನೆ -ಇತರ ಉಪಚಾರಗಳು(PMKSY -OI)
11. ಅಟಲ್ ಭೂಜಲ್ ಯೋಜನೆ
12. ರಾಷ್ಟ್ರೀಯ ಕೃಷಿ ವಿಕಾಸ ಯೋಜನೆ-ತಡೆಅಣೆ ನಿರ್ಮಾಣ (RKVY-CD)
13. ರಾಷ್ಟ್ರೀಯ ಕೃಷಿ ವಿಕಾಸ ಯೋಜನೆ- ಸಮಸ್ಯಾತ್ಮಕ ಮಣ್ಣುಗಳ ಸುಧಾರಣೆ (RKVY-RPS)

(ಇ) ಯೋಜನೆಗಳ ವಿವರ.

1. ಜಲಾನಯನ ಅಭಿವೃದ್ಧಿ ಘಟಕ - ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆ 2.0 Watershed Development Component- Pradhan Mantri Krishi Sinchayi Yojana 2.0 (WDC-PMKSY 2.0)

ಈ ಯೋಜನೆಯು ಕೇಂದ್ರ ಪ್ರಾಯೋಜಿತ ಯೋಜನೆಯಾಗಿದ್ದು, ಸದರಿ ಯೋಜನೆಯನ್ನು 2021-22ನೇ ಸಾಲಿನಿಂದ ರಾಜ್ಯದ 30 ಜಿಲ್ಲೆಗಳ ಆಯ್ದ 57 ತಾಲ್ಲೂಕುಗಳ 2.75 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಅನುಷ್ಠಾನ ಮಾಡಲು ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಅನುಮೋದನ ನೀಡಿರುತ್ತದೆ. ಈ ಯೋಜನೆಯನ್ನು ಸಹ ದಿಬ್ಬದಿಂದ ಕಣಿವೆ ಮಾದರಿಯಲ್ಲಿ ಅನುಷ್ಠಾನ ಮಾಡಲು ವಿವರವಾದ ಯೋಜನಾ ವರದಿಯನ್ನು ತಯಾರಿಸಿ ಕಾರ್ಯಕ್ರಮದ ಅನುಷ್ಠಾನವನ್ನು ಪ್ರಾರಂಭಿಸಲಾಗಿದೆ. ಈ ಯೋಜನೆಯಡಿ ಸಮರ್ಥ ನೀರು ಕೊಯ್ಲು, ಮಣ್ಣಿನ ತೇವಾಂಶ ಸಂರಕ್ಷಣೆ, ಪರ್ಯಾಯ ಬೆಳೆ ವ್ಯವಸ್ಥೆಗಳು, ಕೃಷಿ ಅರಣ್ಯ, ಖುಷ್ಕಿ ತೋಟಗಾರಿಕೆ, ಪಶುಸಂಗೋಪನೆಯ ಮೂಲಕ ಹವಾಮಾನ/ವೈಪರೀತ್ಯ ಮತ್ತು ಬರಗಾಲದ ಅಪಾಯಗಳನ್ನು ಎದುರಿಸುವುದು ಮತ್ತು ರೈತರ ಆದಾಯವನ್ನು ಭದ್ರಪಡಿಸುವುದು; ಯೋಜನಾ ಪ್ರದೇಶಗಳಲ್ಲಿ ನೈಸರ್ಗಿಕ ಸಂಪನ್ಮೂಲಗಳ ಸಮರ್ಥನೀಯ ಬಳಕೆಯ ಮೂಲಕ ಬೆಳೆಗಳು, ಜಾನುವಾರು, ಮೀನುಗಾರಿಕೆ, ಹಾಗೂ ಉತ್ಪಾದನಾ ವ್ಯವಸ್ಥೆಗಳ ಮೂಲಕ ಉತ್ಪಾದಕತೆಯನ್ನು ಸುಧಾರಿಸುವುದು; ಆಸ್ತಿ ರಹಿತ ರೈತರನ್ನು ಗುರುತಿಸುವುದು ಮತ್ತು ಪರ್ಯಾಯ ಜೀವನೋಪಾಯದ ಅವಕಾಶಗಳನ್ನು ಉತ್ತೇಜಿಸುವುದು; ಸುಲಭವಾದ ಕೈಗೆಟುಕುವ ತಂತ್ರಜ್ಞಾನಗಳ ಉತ್ತೇಜನ ಮಾಡುವುದು; ಆದಾಯವನ್ನು ಉತ್ಪಾದಿಸುವ ಅವಕಾಶಗಳಿಗೆ ಹೆಚ್ಚಿನ ಉತ್ತೇಜನ ನೀಡುವುದು ಹಾಗೂ ರೈತ ಉತ್ಪಾದಕರ ಸಂಸ್ಥೆಗಳನ್ನು ರಚಿಸುವುದು/ಬಲವರ್ಧಿಸಲು ಕಾರ್ಯಕ್ರಮವನ್ನು ರೂಪಿಸಲಾಗಿದೆ.

2. ಕೇಂದ್ರ ಪುರಸ್ಕೃತ ಮಳೆ ಆಧಾರಿತ ಪ್ರದೇಶ ಅಭಿವೃದ್ಧಿ (RKVY-RAFTAAR ಮೂಲಕ) ಯೋಜನೆ :

ಈ ಯೋಜನೆಯನ್ನು ವಿಶೇಷವಾಗಿ ರಾಜ್ಯದ ಮಳೆಯಾಶ್ರಿತ ಪ್ರದೇಶದಲ್ಲಿ ಅನುಷ್ಠಾನ ಮಾಡಲಾಗುತ್ತಿದೆ.

ಈ ಕಾರ್ಯಕ್ರಮದಡಿ ರೈತರಿಗೆ ಸಮಗ್ರ ಕೃಷಿ ಪದ್ಧತಿಗಳ ಅಳವಡಿಕೆಯನ್ನು ಪ್ರೋತ್ಸಾಹಿಸುವುದು, ಅದರಲ್ಲೂ ಬಹು-ಬೆಳೆಪದ್ಧತಿ, ಮಿಶ್ರ-ಬೆಳೆ, ಅಂತರ-ಬೆಳೆ, ಬೆಳೆ-ಪರಿವರ್ತನೆ, ತೋಟಗಾರಿಕೆ, ಕೃಷಿ ಅರಣ್ಯ, ಪಶುಸಂಗೋಪನೆ ಘಟಕಗಳನ್ನೊಳಗೊಂಡ ರೈತರ ಆದಾಯವನ್ನು ಹೆಚ್ಚಿಸುವುದಲ್ಲದೆ, ಫಲಾನುಭವಿಗಳಿಗೆ ಮೌಲ್ಯವರ್ಧನೆ ಹಾಗೂ ಸಂಪನ್ಮೂಲ ಸಂರಕ್ಷಣೆಯಡಿ ವಿವಿಧ ಚಟುವಟಿಕೆಗಳಾದ ಜೇನು ಕೃಷಿ, ಸೈಲೇಜ್ ಘಟಕ, ಎರೆಹುಳು ತಯಾರಿಕಾ ಘಟಕಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ.

3. ವಿಶ್ವಬ್ಯಾಂಕ್ ನೆರವಿನ REWARD ಯೋಜನೆ:

ರಾಜ್ಯದಲ್ಲಿ ಜಲಾನಯನ ಕಾಮಗಾರಿಗಳಿಗೆ ಹೆಚ್ಚಿನ ಆದ್ಯತೆ ನೀಡಲು ಜಲಾನಯನ ಅಭಿವೃದ್ಧಿ ಇಲಾಖೆಯಿಂದ ವಿಶ್ವಬ್ಯಾಂಕ್ ನೆರವಿನೊಂದಿಗೆ REWARD ಯೋಜನೆಯನ್ನು 2022-23ನೇ ಸಾಲಿನಿಂದ ಜಾರಿಗೊಳಿಸಲಾಗುತ್ತಿದ್ದು, ಈ ಯೋಜನೆಯಡಿ ರಾಜ್ಯದ 25 ಜಿಲ್ಲೆಗಳ ಸುಮಾರು 23 ಲಕ್ಷ ಹೆ. ಮಳೆಯಾಶ್ರಿತ ಪ್ರದೇಶದಲ್ಲಿ ವೈಜ್ಞಾನಿಕ ವಿಧಾನದಲ್ಲಿ ವಿವಿಧ ತಾಂತ್ರಿಕ ಪಾಲುದಾರ ಸಂಸ್ಥೆಗಳ ಮೂಲಕ ಭೂ-ಸಂಪನ್ಮೂಲ ಸಮೀಕ್ಷೆ (Land Resource Inventory-LRI) ಮತ್ತು ಜಲವಿಜ್ಞಾನ ಅಧ್ಯಯನ (Hydrology) ಕೈಗೊಂಡು ಮಣ್ಣಿನ ಭೌತಿಕ ಹಾಗೂ ರಾಸಾಯನಿಕ ಗುಣಧರ್ಮಗಳ ದತ್ತಾಂಶ ಸಂಗ್ರಹಿಸಿ ಡಿಜಿಟಲ್ ಗ್ರಂಥಾಲಯ ಮತ್ತು ಭೂ-ಸಂಪನ್ಮೂಲ ಪೋರ್ಟಲ್‌ನಲ್ಲಿ ಅಳವಡಿಸಲಾಗುತ್ತದೆ.

ಯೋಜನಾ ಪ್ರದೇಶದ ಜಲಾನಯನಗಳಲ್ಲಿ ವೈಜ್ಞಾನಿಕವಾಗಿ ಸಂಗ್ರಹಿಸಿದ ಭೂ-ಸಂಪನ್ಮೂಲ ಮತ್ತು ಜಲ-ವಿಜ್ಞಾನ ಅಧ್ಯಯನದ ದತ್ತಾಂಶಗಳನ್ನು ಮತ್ತು ಶಿಫಾರಸ್ಸುಗಳನ್ನು ಆಧರಿಸಿ ಯೋಜನಾ ವ್ಯಾಪ್ತಿಯ ಅಂದಾಜು 1.00 ಲಕ್ಷ ಹೆ. ಜಲಾನಯನ ಪ್ರದೇಶದಲ್ಲಿ (20 ಉಪ-ಜಲಾನಯನಗಳು) ಜಲಾನಯನ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲು ಯೋಜನಾ ವರದಿ ತಯಾರಿಸಿ ಸಂಪೂರ್ಣ ಜಲಾನಯನವನ್ನು ಉಪಚರಿಸಲಾಗುತ್ತದೆ. ಭೂರಹಿತರ ಜೀವನೋಪಾಯಕ್ಕಾಗಿ ಆದಾಯ ಉತ್ಪನ್ನ ಚಟುವಟಿಕೆಗಳನ್ನು ಕೈಗೊಳ್ಳಲು ನೆರವು ನೀಡಲಾಗುತ್ತದೆ.

4. <u>ನಬಾರ್ಡ್ ಆರ್.ಐ.ಡಿ.ಎಫ್ (ಟ್ರಾಂಚಿ-27) ನೆರವಿನ ಜಲಾನಯನ ಅಭಿವೃದ್ಧಿ ಯೋಜನೆಗಳು.</u>

ಈ ಯೋಜನೆ ಮೂಲಕ ಮಣ್ಣು ಮತ್ತು ನೀರು ಸಂರಕ್ಷಣೆಗಾಗಿ ಉಪಜಲಾನಯನ ಪ್ರದೇಶಗಳಲ್ಲಿ ಮೇಲ್ ಸ್ತರ ಉಪಚಾರಗಳು ರಬಲ್ ತಡೆ & ಬೋಲ್ಡರ್ ತಡೆ ಮತ್ತು ನಾಲಾ ಪ್ರದೇಶ ಉಪಚಾರಕ್ಕಾಗಿ ತಡೆಅಣೆಗಳು, ನಾಲಾಬದುಗಳು, ಗೋಕಟ್ಟೆ ಹಾಗೂ ವಿವಿಧ ನೀರು ಸಂಗ್ರಹಣಾ ವಿನ್ಯಾಸಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ.

5. <u>ರೈತ ಉತ್ಪಾದಕರ ಸಂಸ್ಥೆಗಳು (FPOs)</u>

ರೈತ ಉತ್ಪಾದಕರ ಸಂಸ್ಥೆಗಳನ್ನು ಸ್ಥಾಪಿಸುವ ಮೂಲಕ ಸಣ್ಣ ಹಾಗೂ ಅತಿ ಸಣ್ಣ ರೈತರು ತಮ್ಮ ಉತ್ಪನ್ನಗಳನ್ನು ಮಾರುಕಟ್ಟೆ ಮಾಡುವಲ್ಲಿ ಒಬ್ಬಂಟಿಯಾಗಿ ಎದುರಿಸುವ ಹಲವಾರು ಸವಾಲುಗಳನ್ನು ಪರಿಹರಿಸಬಹುದು. ಉತ್ಪಾದಕರ ಸಂಸ್ಥೆಯಾಗಿ ರೈತ ಉತ್ಪಾದಕರ ಸಂಸ್ಥೆಯು ಸ್ಥಳೀಯ ರೈತ ಸಮುದಾಯದ ಸಂಧಾನ ಸಾಮರ್ಥ್ಯವನ್ನು ಹಾಗೂ ವ್ಯವಹಾರಿಕ ಪಾಲುದಾರಿಕೆಯನ್ನು ಅಭಿವೃದ್ಧಿಗೊಳಿಸುವ ಮೂಲಕ ರೈತರ ಆರ್ಥಿಕ ಹಾಗೂ ಔದ್ಯಮಿಕ ಸಂಭಾವ್ಯ ಶಕ್ತಿಯನ್ನು ಸಡಿಲಿಸುವಂತೆ ಮಾಡಬಹುದಾಗಿದೆ. ಈ ಸಂಸ್ಥೆಗಳಿಂದ ಉತ್ಪಾದಕರ ಬೇಡಿಕೆಗೆ ಅನುಗುಣವಾಗಿ ಹಾಗೂ ಮೌಲ್ಯ ಸರಪಳಿಯ ಪದ್ಧತಿಯನ್ನು ಅಳವಡಿಸುವ ಮೂಲಕ ಉತ್ಪಾದಕರ ಆರ್ಥಿಕ ಹಾಗೂ ಸಾಮಾಜಿಕ ಲಾಭಗಳನ್ನು ಹೆಚ್ಚಿಸುವ ಉದ್ದೇಶವನ್ನು ಹೊಂದಿದೆ.

ಇಲಾಖೆಯು ರೈತ ಉತ್ಪಾದಕರ ಸಂಸ್ಥೆಗಳ ರಚನೆ ಮತ್ತು ಉತ್ತೇಜನವನ್ನು ಈ ಕೆಳಕಂಡ ಯೋಜನೆಗಳಡಿ ಅನುಷ್ಠಾನಗೊಳಿಸಲಾಗುತ್ತಿದೆ.

1) ರಾಷ್ಟ್ರೀಯ ಕೃಷಿ ವಿಕಾಸ ಯೋಜನೆ
2) ಕೇಂದ್ರ ಪುರಸ್ಕೃತ ಯೋಜನೆ-10000 ರೈತ ಉತ್ಪಾದಕರ ಸಂಸ್ಥೆಗಳ ರಚನೆ ಮತ್ತು ಉತ್ತೇಜನೆ
3) ಅಮೃತ ರೈತ ಉತ್ಪಾದಕರ ಸ್ಥಾಪನೆ ಮತ್ತು ಪ್ರೋತ್ಸಾಹ ಯೋಜನೆ.

6. <u>ರೈತ ಉತ್ಪನ್ನಗಳಿಗೆ ಏಕೀಕೃತ ಬ್ರ್ಯಾಂಡಿಂಗ್‌ಯೋಜನೆ:</u>

1. ಹಾಲಿ ಮತ್ತು ಮಾಜಿ ಕೃಷಿ/ತೋಟಗಾರಿಕೆ/ ಪಶು ಸಂಗೋಪನೆ ವಿಶ್ವವಿದ್ಯಾನಿಲಯಗಳ ವಿದ್ಯಾರ್ಥಿಗಳನ್ನು ಉದ್ದಿಮೆದಾರರಾಗಿ ಬೆಳೆಯಲು ಪ್ರೋತ್ಸಾಹಿಸುವುದು. ಉತ್ಪನ್ನಗಳ ಉತ್ಪಾದನೆ, ಸಂಸ್ಕರಣೆ ಮತ್ತು ಮಾರಾಟದಲ್ಲಿ ಹೊಸ ತಾಂತ್ರಿಕತೆ ಅಳವಡಿಸಿಕೊಳ್ಳಲು ಈ ವಿದ್ಯಾರ್ಥಿಗಳ ಸೇವೆಯನ್ನು ಬಳಸಿಕೊಂಡು ರೈತ ಉತ್ಪಾದಕರ ಸಂಸ್ಥೆಗಳ ಬಲವರ್ಧನೆಗೆ ಶ್ರಮಿಸುವುದು.
2. ರೈತ ಉತ್ಪಾದಕರ ಸಂಸ್ಥೆಗಳಿಗೆ ಸಾಮರ್ಥ್ಯ ಬಲವರ್ಧನೆಯಲ್ಲಿ ಸಾಂಸ್ಥಿಕ ಬೆಂಬಲ ನೀಡುವುದು ಹಾಗೂ ಅವುಗಳಿಗೆ ಮುನ್ನಡೆಯಲು ಸಹಾಯ ಮಾಡುವುದು.
3. ರೈತರು/ರೈತ ಉತ್ಪಾದಕರ ಸಂಸ್ಥೆಗಳಿಗೆ ಇತರ ಪಾಲುದಾರರೊಂದಿಗೆ ಮಾಹಿತಿ, ಉತ್ಪನ್ನಗಳು, ಸರಬರಾಜು ಮತ್ತು ಮಾರುಕಟ್ಟೆ ಸರಪಳಿ ಹಾಗೂ ಇತರೆ ಸೇವೆಗಳನ್ನು ಒದಗಿಸುವ ವೇದಿಕೆ ಕಲ್ಪಿಸುವುದು.
4. ರೈತರ ಉತ್ಪನ್ನಗಳನ್ನು ರೈತ ಉತ್ಪಾದಕರ ಸಂಸ್ಥೆಗಳ ಮೂಲಕ ರಾಜ್ಯ, ರಾಷ್ಟ್ರ ಮತ್ತು ಅಂತರಾಷ್ಟ್ರೀಯ ಮಾರುಕಟ್ಟೆಗಳಲ್ಲಿ ಮಾರಾಟ ಮಾಡಲು ಅನುಕೂಲವಾಗುವಂತೆ 'ನಂದಿನಿ' ಮಾದರಿಯಲ್ಲಿ ಏಕೀಕೃತ ಬ್ರ್ಯಾಂಡಿಂಗ್ ರೂಪಿಸುವುದು.

7. <u>ರೈತ ಉತ್ಪಾದಕ ಸಂಸ್ಥೆಗಳನ್ನು ಬಲಪಡಿಸಲು ಹಿಂದುಳಿದ ತಾಲ್ಲೂಕುಗಳ 100 ರೈತ ಉತ್ಪಾದಕರ ಸಂಸ್ಥೆಗಳಿಗೆ ಸಹಕಾರಿ ಮತ್ತು ವಾಣಿಜ್ಯ ಬ್ಯಾಂಕುಗಳು ನೀಡುವ ತಲಾ ರೂ. 20.00 ಲಕ್ಷ ಗಳವರೆಗಿನ ಸಾಲಕ್ಕೆ ಶೇ.4ರ ಬಡ್ಡಿ ಸಹಾಯಧನ ನೀಡುವ ಯೋಜನೆ.</u>

ರೈತ ಉತ್ಪಾದಕರ ಸಂಸ್ಥೆಗಳು ಗ್ರಾಹಕರ ಬೇಡಿಕೆಗೆ ಅನುಗುಣವಾಗಿ ಹಾಗೂ ಮೌಲ್ಯ ಸರಪಳಿಯ ಪದ್ಧತಿಯನ್ನು ಅಳವಡಿಸುವ ಮೂಲಕ ರೈತರ ಉತ್ಪನ್ನಗಳನ್ನು ಕ್ರೋಡಿಕರಿಸಿ, ಮೌಲ್ಯವರ್ಧಿಸಿ, ಗ್ರಾಹಕರಿಗೆ ಉತ್ತಮ ಗುಣಮಟ್ಟದ ಸಂಸ್ಕರಿಸಿದ ಉತ್ಪನ್ನಗಳನ್ನು ರೈತ ಉತ್ಪಾದಕರ ಸಂಸ್ಥೆಗಳ ಮೂಲಕ ಮಾರುಕಟ್ಟೆ ದರಕಿಂತ ಕಡಿಮೆ ದರದಲ್ಲಿ ಒದಗಿಸುವ ಮೂಲಕ ಹಿಂದುಳಿದ ತಾಲ್ಲೂಕುಗಳ ರೈತ ಉತ್ಪಾದಕರ ಸಂಸ್ಥೆಗಳ ಆದಾಯ ವೃದ್ಧಿಸಲು ಸಹಕಾರಿಯಾಗಲು ಸದರಿ ಯೋಜನೆಯನ್ನು ರೂಪಿಸಲಾಗಿರುತ್ತದೆ. ಈ ಹಿನ್ನಲೆಯಲ್ಲಿ, ಹಿಂದುಳಿದ ತಾಲ್ಲೂಕಿಗಳಲ್ಲಿ ರಚನೆಗೊಂಡಿರುವ 100 ರೈತ ಉತ್ಪಾದಕರ ಸಂಸ್ಥೆಗಳು ಸಹಕಾರಿ ಮತ್ತು ವಾಣಿಜ್ಯ ಬ್ಯಾಂಕುಗಳಿಂದ ಪಡೆದ ತಲಾ ರೂ.20.00ಲಕ್ಷ ವರೆಗಿನ ಸಾಲಕ್ಕೆ ಶೇ.4ರಷ್ಟು ಬಡ್ಡಿ ಸಹಾಯಧನ ಸರ್ಕಾರದಿಂದ ನೀಡುವುದರಿಂದ, ಸದರಿ ರೈತ ಉತ್ಪಾದಕರ ಸಂಸ್ಥೆಗಳ ವ್ಯವಹಾರಿಕ ಸಾಮರ್ಥ್ಯವನ್ನು ಹೆಚ್ಚಿಸಲು ಮತ್ತು ಹಿಂದುಳಿದ ತಾಲ್ಲೂಕುಗಳ ರೈತ ಉತ್ಪಾದಕರ ಸಂಸ್ಥೆಗಳ ಸಮಗ್ರ ಸುಧಾರಣೆ ಸಹಕಾರಿಯಾಗುವುದು.

8. ಜಲಾನಯನ ಅಭಿವೃದ್ಧಿ ಮೂಲಕ ಬರಗಾಲವನ್ನು ತಡೆಯುವಿಕೆ ಯೋಜನೆ (Watershed Development to Prevent Drought):

ರಾಜ್ಯದಲ್ಲಿ ಜಲಾನಯನ ಉಪಚಾರಕ್ಕೆ ಬಾಕಿ ಲಭ್ಯವಿರುವ ಮಳೆಯಾಶ್ರಿತ ಪ್ರದೇಶದಲ್ಲಿ 2019-20ನೇ ಸಾಲಿನಿಂದ 2023-24ನೇ ಸಾಲಿನವರೆಗೆ, ಆಯ್ದ 100 ಬರಪೀಡಿತ ಮತ್ತು ಅತೀ ಹೆಚ್ಚು ಅಂತರ್ಜಲ ಶೋಷಿತ ತಾಲ್ಲೂಕುಗಳಲ್ಲಿ, ಪ್ರತಿ ತಾಲ್ಲೂಕಿನಲ್ಲಿ 3,000 ರಿಂದ 5,000 ಹೆಕ್ಟೇರ್ ಪ್ರದೇಶವನ್ನು ಭೂ ಸಂಪನ್ಮೂಲ ಹಾಗೂ ಜಲಸಂಪನ್ಮೂಲ ಸಮೀಕ್ಷೆಯ ಮಾಹಿತಿಗಳನ್ನಾಧರಿಸಿ ಜಲಾನಯನ ಅಭಿವೃದ್ಧಿ ಯೋಜನೆಗಳನ್ನು ಸಂಪೂರ್ಣ ಜಲಾನಯನ ಉಪಚಾರದ ವಿಧಾನದಲ್ಲಿ ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣಾ ಉದ್ಯೋಗ ಖಾತ್ರಿ ಯೋಜನೆ, ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆ ಕಾರ್ಯಕ್ರಮದೊಡನೆ ಹಾಗೂ ಇತರ ಇಲಾಖೆಗಳ ಯೋಜನೆಗಳೊಂದಿಗೆ ಒಗ್ಗೂಡಿಸಿ ಬರ ನಿರೋಧಕ ಜಲಾನಯನ ಚಟುವಟಿಕೆಗಳನ್ನು ಅನುಷ್ಠಾನ ಮಾಡಲಾಗುತ್ತಿದೆ.

9. ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆ - ಇತರೆ ಉಪಚಾರಗಳು Pradhan Mantri Krishi Sinchayi Yojana-Other Interventions (PMKSY- OI)

ಈ ಯೋಜನೆಯಡಿ ವೈಯಕ್ತಿಕ ನೀರಿನ ಮೂಲಗಳು/ನೀರು ಸಂಗ್ರಹಣಾ ವಿನ್ಯಾಸಗಳ ರಚನೆ, ಸಣ್ಣ ನೀರು ಸಂಗ್ರಹಣಾ ವಿನ್ಯಾಸಗಳ ಮರುಸ್ಥಾಪನೆ/ನವೀಕರಣ, ಅಂತರ್ಜಲ ಶೋಷಿತವಲ್ಲದ ತಾಲ್ಲೂಕುಗಳಲ್ಲಿ ಕೊಳವೆ ಬಾವಿ ನಿರ್ಮಾಣ, ಪೂರ್ವ ಎರಕಹೊಯ್ದ ನೀರು ವಿತರಣಾ ವ್ಯವಸ್ಥೆ, ನೀರು ಎತ್ತುವ ಸಾಧನಗಳನ್ನು ಒದಗಿಸುವುದರ ಮೂಲಕ ಸೂಕ್ಷ್ಮ ನೀರಾವರಿ ಘಟಕಗಳೊಂದಿಗೆ ಜೋಡಿಸುವುದು.

10. ಅಟಲ್ ಭೂಜಲ್ ಯೋಜನೆ:

ಅಟಲ್ ಭೂಜಲ್ ಯೋಜನೆಯು ಜಲ್ ಶಕ್ತಿ ಮಂತ್ರಾಲಯ, ಭಾರತ ಸರ್ಕಾರದ ಕೇಂದ್ರ ವಲಯ ಯೋಜನೆಯಾಗಿದ್ದು, ಗುರುತಿಸಲಾದ ನೀರಿನ ಶೋಷಿತ ಪ್ರದೇಶಗಳಲ್ಲಿ ಅಂತರ್ಜಲ ನೀರಿನ ಬೇಡಿಕೆ ಮತ್ತು ಸರಬರಾಜು ನಿರ್ವಹಣೆಗೆ ಸಮುದಾಯ ಸಹಭಾಗಿತ್ವದಲ್ಲಿ ಒತ್ತು ನೀಡಲು ರೂಪಿಸಿರುವ ಕಾರ್ಯಕ್ರಮವಾಗಿದೆ. ರಾಜ್ಯದಲ್ಲಿ ಆಯ್ದ 14 ಜಿಲ್ಲೆಗಳ 41 ತಾಲ್ಲೂಕುಗಳಲ್ಲಿ 1199 ಶೋಷಿತ ಗ್ರಾಮ ಪಂಚಾಯತಿಗಳಲ್ಲಿ ಕೇಂದ್ರ ಮತ್ತು ರಾಜ್ಯ ಯೋಜನೆಗಳ ಒಗ್ಗೂಡಿಸುವಿಕೆಯ ಮೂಲಕ ಅಂತರ್ಜಲ ನಿರ್ವಹಣೆಯನ್ನು ಉತ್ತೇಜಿಸುವುದು ಯೋಜನೆಯ ಒಂದು ಪ್ರಮುಖ ಉದ್ದೇಶವಾಗಿರುತ್ತದೆ.

ಅಂತೆಯೇ, ಅಂತರ್ಜಲ ನಿರ್ವಹಣೆಗೆ ಪೂರಕವಾಗಿರುವ ಭೂಜಲ ಪೂರಣ ಫಲಿತಾಂಶವನ್ನು ಪಡೆಯಲು ಯೋಜನೆಯಡಿ ಗುರುತಿಸಿರುವ ಅರ್ಹ Supply Intervention ಸಂಬಂಧಿಸಿದ ಮಳೆನೀರು ಕೊಯ್ಲು, ನೀರು ಇಂಗುವಿಕೆ ಮತ್ತು ಜಲಮರುಪೂರಣ ಕಾಮಗಾರಿಗಳಿಗೆ ಸಂಬಂಧಿಸಿದ ಬಹುತೇಕ ನೀರು ಕೊಯ್ಲು ಮತ್ತು ಸಂರಕ್ಷಣೆ ರಚನೆಗಳ ಕಾಮಗಾರಿ ಕಾರ್ಯಕ್ರಮಗಳನ್ನು ಜಲಾನಯನ ಅಭಿವೃದ್ಧಿ ಇಲಾಖೆ ವತಿಯಿಂದ ಈ ಮೇಲೆ ತಿಳಿಸಿರುವಂತೆ ಆಯ್ದ 1199 ಶೋಷಿತ ಗ್ರಾಮ ಪಂಚಾಯತಿಗಳಲ್ಲಿ ಮೂರು ವರ್ಷಗಳ ಅವಧಿಯಲ್ಲಿ ಅನುಷ್ಠಾನಗೊಳಿಸಲಾಗುವುದು.

11. ರಾಷ್ಟ್ರೀಯ ಕೃಷಿ ವಿಕಾಸ ಯೋಜನೆ (Rashtriya Krishi Vikas Yojane)

a) *ತಡೆಅಣೆ ನಿರ್ಮಾಣ (Construction of Check dam):*

ತಡೆ ಅಣೆಯು ಮಳೆ ನೀರು ಕೊಚ್ಚಣೆಯಿಂದ ಹಳ್ಳಗಳಲ್ಲಿ ಹರಿದು ಹೋಗುವ ನೀರನ್ನು ತಡೆಗಟ್ಟಲು ಮತ್ತು ರಚಿಸಲಾಗುವ ಮಳೆ ನೀರು ಕೊಯ್ಲು ರಚನೆಯಾಗಿರುತ್ತದೆ. ಹರಿದು ಹೋಗುವ ಮಳೆ ನೀರನ್ನು ತಡೆಗಟ್ಟುವುದರಿಂದ ಭೂಮಿಯಲ್ಲಿ ನೀರನ್ನು ಇಂಗಿಸಲು ಹೆಚ್ಚು ಸಮಯಾವಕಾಶ ನೀಡುವ ಮೂಲಕ ಅಂತರ್ಜಲ ವೃದ್ಧಿಗೆ ಅನುಕೂಲವಾಗುವುದು.

b) *ಸಮಸ್ಯಾತ್ಮಕ ಮಣ್ಣುಗಳ ಸುಧಾರಣೆ ಕಾರ್ಯಕ್ರಮ (Reclamation of Problematic Soil):*

ಸಮಸ್ಯಾತ್ಮಕ ಮಣ್ಣಿನ ಪ್ರದೇಶಗಳಲ್ಲಿ ಅಂತರ ಬಸಿ ಕಾಲುವೆ ನಿರ್ಮಾಣ ಮೂಲಕ ಸವಳು ಜವಳು ಮಣ್ಣಿನ ಸುಧಾರಣೆ ಮತ್ತು ಮಣ್ಣು ಸುಧಾರಣಾ ಪರಿಕರಗಳು ಮತ್ತು ಹಸಿರು ಗೊಬ್ಬರಗಳ ಬಳಕೆ ಮೂಲಕ ಆಮ್ಲೀಯ ಮಣ್ಣುಗಳ ಸುಧಾರಣಾ ಕ್ರಮಗಳನ್ನು ಕೈಗೊಂಡು, ರೈತರಲ್ಲಿ ಮಣ್ಣುಗಳ ಸಮಸ್ಯೆ ಕುರಿತು ಅರಿವು ಮೂಡಿಸಿ, ಸುಧಾರಿತ ಬೇಸಾಯ ಕ್ರಮಗಳನ್ನು ಅಳವಡಿಸಲು ಉತ್ತೇಜಿಸುವುದು

c) *ಸಾರ್ವಜನಿಕ ಖಾಸಗಿ ಸಹಭಾಗಿತ್ವದಲ್ಲಿ ಸಮಗ್ರ ಕೃಷಿ ಅಭಿವೃದ್ಧಿ (PPP-IAD):*

ರಾಷ್ಟ್ರೀಯ ಕೃಷಿ ವಿಕಾಸ ಯೋಜನೆಯಡಿಯಲ್ಲಿ ಸಾರ್ವಜನಿಕ ಖಾಸಗಿ ಸಹಭಾಗಿತ್ವದಲ್ಲಿ ಕೃಷಿಯ ಉತ್ಪಾದನೆಯಿಂದ ಹಿಡಿದು ಬಳಕೆಯ ಹಂತದವರೆಗೂ ಸಂಪೂರ್ಣ ಮೌಲ್ಯವೃದ್ಧಿ ಸರಪಳಿಯನ್ನು ಸೂಕ್ತ ಮಧ್ಯಸ್ಥಿಕೆ /ತಾಂತ್ರಿಕತೆಗಳನ್ನು ಅಳವಡಿಸಿಕೊಳ್ಳುವುದರ ಮೂಲಕ ಕೃಷಿಯಲ್ಲಿ ಉತ್ಪಾದಕತೆಯನ್ನು ಹೆಚ್ಚಿಸುವುದು ಹಾಗೂ ಕೊಯ್ಲಿನೋತ್ತರ ನಷ್ಟವನ್ನು ಕಡಿಮೆಗೊಳಿಸುವುದು ಈ ಯೋಜನೆಯ ಉದ್ದೇಶವಾಗಿರುತ್ತದೆ. ಈ ಯೋಜನೆಯಿಂದ ರೈತರಿಗೆ ನೇರ ಮಾರುಕಟ್ಟೆ ಬೆಂಬಲವನ್ನು ನೀಡುವುದರ ಮೂಲಕ ಮಧ್ಯವರ್ತಿಗಳ ಹಾವಳಿಯನ್ನು ತಪ್ಪಿಸುವುದಲ್ಲದೆ, ರೈತರು ಉತ್ಪಾದಿಸುವ ಬೆಳೆಗೆ ಸೂಕ್ತ ಬೆಲೆಯನ್ನು ದೊರಕಿಸಿಕೊಡಲು ಸಹಾಯವಾಗುತ್ತಿದೆ.

ಆಯುಕ್ತರು
ಜಲಾನಯನ ಅಭಿವೃದ್ಧಿ ಇಲಾಖೆ

## ಅನುಬಂಧ-2

## ಪ್ರಸ್ತುತ ಹಣಕಾಸು ವರ್ಷದಲ್ಲಿ (2023-24) ರೈತರ ಕಲ್ಯಾಣಕ್ಕಾಗಿ ಜಲಾನಯನ ಅಭಿವೃದ್ಧಿ ಇಲಾಖೆಯಡಿ ಮೀಸಲಿಟ್ಟ ಅನುದಾನ, ಮಂಜೂರು ಮಾಡಿದ ಅನುದಾನ ಹಾಗೂ ಬಳಕೆಯಾದ ಅನುದಾನದ ವಿವರ (ನವೆಂಬರ್ 2023ರ ಅಂತ್ಯಕ್ಕೆ)

LCQ-563

(ರೂ.ಲಕ್ಷಗಳಲ್ಲಿ)

| ಕ್ರ.ಸಂ | ಯೋಜನೆ | ಮೀಸಲಿಟ್ಟ ಅನುದಾನ | ಮಂಜೂರು ಮಾಡಿದ ಅನುದಾನ (ಬಿಡುಗಡೆ) | ಬಳಕೆಯಾದ ಅನುದಾನ (ವೆಚ್ಚ) |
|---|---|---|---|---|
| 1 | ಜಲಾನಯನ ಅಭಿವೃದ್ಧಿ ಘಟಕ-ಪ್ರಧಾನ ಮಂತ್ರಿ ಕೃಷಿ ಸಿಂಚಯಿ ಯೋಜನೆ 2.0 (WDC- PMKSY 2.0) (ಕೇಂದ್ರ ಪುರಸ್ಕೃತ ಯೋಜನೆ) (*) | 16160.00 | 10761.66 | 7443.14 |
| 2 | ಮಳೆ ಆಧಾರಿತ ಪ್ರದೇಶ ಅಭಿವೃದ್ಧಿ (RAD) RKVY-RAFTAAR) (ಕೇಂದ್ರ ಪುರಸ್ಕೃತ ಯೋಜನೆ) (*) | 1500.00 | 815.28 | 985.50 |
| 3 | ವಿಶ್ವ ಬ್ಯಾಂಕ್ ನೆರವಿನ REWARD ಯೋಜನೆ (*) | 10000.00 | 2500.00 | 3496.85 |
| 4 | ನಬಾರ್ಡ್ ಆರ್.ಐ.ಡಿ.ಎಫ್ (ಟ್ರಾಂಚೆ-27) ನೆರವಿನ ಜಲಾನಯನ ಅಭಿವೃದ್ಧಿ ಯೋಜನೆಗಳು | 687.43 | 458.29 | 312.36 |
| 5 | ರೈತ ಉತ್ಪಾದಕರ ಸಂಸ್ಥೆಗಳ ಉತ್ತೇಜನ (FPOs) & ಅಮೃತ ರೈತ ಉತ್ಪಾದಕರ ಸಂಸ್ಥೆಗಳ ಸ್ಥಾಪನೆ ಮತ್ತು ಪ್ರೋತ್ಸಾಹ (AFPO) | 400.00 | 266.67 | 131.21 |
| 6 | ರೈತ ಉತ್ಪನ್ನಗಳಿಗೆ ಏಕೀಕೃತ ಬ್ರ್ಯಾಂಡಿಂಗ್ ಯೋಜನೆ | 200.00 | 0.00 | 0.00 |
| 7 | ರೈತ ಉತ್ಪಾದಕ ಸಂಸ್ಥೆಗಳನ್ನು ಬಲಪಡಿಸಲು ಹಿಂದುಳಿದ ತಾಲ್ಲೂಕುಗಳ 100 ರೈತ ಉತ್ಪಾದಕರ ಸಂಸ್ಥೆಗಳಿಗೆ ಸಹಕಾರಿ ಮತ್ತು ವಾಣಿಜ್ಯ ಬ್ಯಾಂಕುಗಳು ನೀಡುವ ತಲಾ ರೂ. 20.00 ಲಕ್ಷ ಗಳವರೆಗಿನ ಸಾಲಕ್ಕೆ ಶೇ.4ರ ಬಡ್ಡಿ ಸಹಾಯಧನ ನೀಡುವ ಯೋಜನೆ. | 50.00 | 0.00 | 0.00 |
| 8 | 10,000 ರೈತ ಉತ್ಪಾದಕರ ಸಂಸ್ಥೆಗಳ ರಚನೆ ಮತ್ತು ಉತ್ತೇಜನ (ಕೇಂದ್ರ ವಲಯ) | 1392.65 | 380.65 | 42.65 |

(*) ವೆಚ್ಚದಲ್ಲಿ ಪ್ರಾರಂಭಿಕ ಶಿಲ್ಕು ಸೇರಿರುತ್ತದೆ.

ಷರಾ: ಮಂಜೂರಾದ ಅನುದಾನವನ್ನು ಪ್ರಸ್ತುತ ಸಾಲಿನಲ್ಲಿಯೇ ಬಳಕೆ ಮಾಡಿಕೊಳ್ಳಲಾಗುವುದು.

ಆಯುಕ್ತರು
ಜಲಾನಯನ ಅಭಿವೃದ್ಧಿ ಇಲಾಖೆ